

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 239 | ₹ ಬೆಲೆ: 4 | Wednesday, 15, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23



ನಾಡಿನ ಸಮಸ್ತ ಜನತೆಗೆ

ದೀಪಾವಳಿ ಹಬ್ಬದ ಹಾರ್ದಿಕ



ಶುಭಾಶಯಗಳು


## ಪೊಲೀಸರ ಕಿರುಕುಳದಿಂದ ನೊಂದು ಬೆಂಕಿ ಹಚ್ಚಿಕೊಂಡು ಯುವಕ ಸಾವಿಗೆ ಶರಣು

ಮೈಸೂರು: ಪೊಲೀಸರಿಂದ ಕಿರುಕುಳ ಆರೋಪದ ಮೇಲೆ ಬೆಂಕಿ ಹಚ್ಚಿಕೊಂಡ ಯುವಕ ಮಂಗಳವಾರ ಇಲ್ಲಿ ಸಾವಿಗೀಡಾಗಿದ್ದಾನೆ.

ನಂಜನಗೂಡು ತಾಲೂಕಿನ ನಗರ್ಲೆ ಗ್ರಾಮದ ನಿವಾಸಿ ಇಪ್ಪತ್ಮೂರು ವರ್ಷದ ಕಿರಣ್ ಕುಮಾರ್ ಎಂಬಾತ ಪೊಲೀಸರ ಕಿರುಕುಳದಿಂದ ಬೇಸತ್ತು ತನ್ನ ನಿವಾಸದಲ್ಲಿಯೇ ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಕಸ್ಟಡಿಯಲ್ಲಿರುವಾಗ ಪೊಲೀಸರು ನೀಡಿದ ಕಿರುಕುಳದಿಂದಾಗಿ ತಾನು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದಾಗಿ ಸಂತ್ರಸ್ತ ವಿಡಿಯೋದಲ್ಲಿ ಹೇಳಿಕೊಂಡಿದ್ದಾನೆ.

ಸುಟ್ಟ ಗಾಯಗಳಿಂದ ಬಳಲುತ್ತಿದ್ದ ಅವರನ್ನು ಕೆಆರ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.

ನಗರ್ಲೆ ಗ್ರಾಮದಲ್ಲಿ ನಡೆದ ಹಿಂಸಾಚಾರದ ಘಟನೆಗೆ ಸಂಬಂಧಿಸಿದಂತೆ ಬಿಳಿಗೆರೆ ಪೊಲೀಸರು ಸಂತ್ರಸ್ತನನ್ನು ಕಸ್ಟಡಿಗೆ ತೆಗೆದುಕೊಂಡಿದ್ದರು. ಈ ವೇಳೆ ಚಿತ್ರಹಿಂಸೆ ನೀಡಿದ್ದರು ಎನ್ನುವ ಆರೋಪ ಕೇಳಿಬಂದಿದೆ.

ಬಂಧನದಿಂದ ತಪ್ಪಿಸಿಕೊಂಡು ಮನೆಗೆ ಮರಳಿದ ಯುವಕ, ತನ್ನ ಮೈಮೇಲೆ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡಿದ್ದಾನೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ನಡೆಯುತ್ತಿದೆ.

## 'ಒಬ್ಬೇ ಒಬ್ಬ ಬಿಜೆಪಿ ಪರಿವಾರದ ಸದಸ್ಯ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿ ಜೈಲು ಸೇರಿಲ್ಲ': ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಒಬ್ಬೇ ಒಬ್ಬ ಬಿಜೆಪಿ ಪರಿವಾರದ ಸದಸ್ಯ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿ ಜೈಲು ಸೇರಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಿಶ್ವ ಮಟ್ಟದಲ್ಲಿ ಭಾರತ ತಲೆ ಎತ್ತಿ ನಿಲ್ಲಲು ನೆಹರು ಭಾರತ ದೇಶಕ್ಕೆ ಹಾಕಿದ ಭದ್ರ ಬುನಾದಿ ಕಾರಣ ಎಂದು ತಿಳಿಸಿದರು.

ಕೆಪಿಸಿಸಿ ಕಚೇರಿಯಲ್ಲಿ ನಡೆದ ಮಾಜಿ ಪ್ರಧಾನಿ ಜವಾಹರಲಾಲ್ ನೆಹರೂ ಅವರ 134ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಮುಖ್ಯಮಂತ್ರಿ, ಬಿಜೆಪಿಯವರು ಸ್ವಾತಂತ್ರ್ಯ ಹೋರಾಟದ ಫಲಾನುಭವಿಗಳು ಅಷ್ಟೆ. ಇವರ್ಯಾರೂ ದೇಶದ ಸ್ವಾತಂತ್ರ್ಯಕ್ಕಾಗಿ ಅಪ್ಪಿತಪ್ಪಿಯೂ ಹೋರಾಡಿದವರಲ್ಲ.

ಅವರು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಲಿಲ್ಲ ಎನ್ನುವ ಕೀಳರಿಮೆ ಮತ್ತು ಅಳುಕಿನಿಂದ ಸ್ವಾತಂತ್ರ್ಯ ಹೋರಾಟಗಾರರಾಗಿ 9 ವರ್ಷ ಜೈಲು ವಾಸ ಅನುಭವಿಸಿ 17 ವರ್ಷ ದೇಶದ ಪ್ರಧಾನಿ ಆಗಿದ್ದ ನೆಹರೂ ಅವರನ್ನು ಆಡಿಕೊಳ್ಳುವುದನ್ನೇ ಬಂಡವಾಳ ಮಾಡಿಕೊಂಡಿದ್ದಾರೆ ಎಂದು ಟೀಕಿಸಿದರು.

ಶಿಕ್ಷಣ ಸಂಸ್ಥೆಗಳು, ವಿಜ್ಞಾನ-ಸಂಶೋಧನಾ ಸಂಸ್ಥೆಗಳು, ತಂತ್ರಜ್ಞಾನ, ವಿಶ್ವವಿದ್ಯಾಲಯಗಳ ಸ್ಥಾಪನೆ ಮಾಡಿದ್ದು, ಕೃಷಿ ಅಭಿವೃದ್ಧಿ ನೆಹರೂ ಅವರ ದೂರದೃಷ್ಟಿಯ ಸಾಧನೆಗಳಾಗಿವೆ. ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಇಲ್ಲಿ ಏನೇನೂ ಇರಲಿಲ್ಲ. ಶಿಕ್ಷಣ ಸಂಸ್ಥೆಗಳು ಇರಲಿಲ್ಲ, ನೀರಾವರಿ ವ್ಯವಸ್ಥೆ ಇರಲಿಲ್ಲ. ಆದರೆ ದೇಶದ ಮೊದಲ ಪ್ರಧಾನಿಯಾಗಿ ಆರ್ಥಿಕವಾಗಿ, ಸಾಮಾಜಿಕವಾಗಿ, ಪ್ರಜಾಪ್ರಭುತ್ವವಾದಿ ದೇಶವಾಗಿ ಭಾರತವನ್ನು ಕಟ್ಟಿ ನಿಲ್ಲಿಸಿದವರು ನೆಹರು ಎಂದರು.

ಶಿಕ್ಷಣ ಸಂಸ್ಥೆಗಳು, ವಿಜ್ಞಾನ, ಸಂಶೋಧನಾ ಸಂಸ್ಥೆಗಳು, ತಾಂತ್ರಿಕ ಕಾಲೇಜುಗಳು, ವೈದ್ಯಕೀಯ ಅಧ್ಯಯನ ಸಂಸ್ಥೆಗಳು, ಅಣೆಕಟ್ಟುಗಳು, ಆಸ್ಪತ್ರೆಗಳು ಸೇರಿ ಆಧುನಿಕ ಭಾರತದ ನಿರ್ಮಾಣಕ್ಕೆ ಅಗತ್ಯವಾದ ಎಲ್ಲಾ ಕ್ಷೇತ್ರಗಳನ್ನೂ ಆಗಿನ ಕಾಲಕ್ಕೇ ಸ್ಥಾಪಿಸಿದ್ದರು.

17 ವರ್ಷಗಳ ಕಾಲ ಪ್ರಧಾನಿ ಆಗಿದ್ದ ನೆಹರೂ ಅವರು ಚರ್ಚೆ, ಸಂವಾದದಲ್ಲಿ ನಂಬಿಕೆ ಇಟ್ಟುಕೊಂಡಿದ್ದರು. ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಶ್ರಮಿಸುವವರ ಕಟುಟೀಕೆಗಳನ್ನೂ ಅತ್ಯಂತ ಸಹನೆಯಿಂದ ಸ್ವೀಕರಿಸುತ್ತಿದ್ದರು. ಅಷ್ಟು ದೊಡ್ಡ ವ್ಯಕ್ತಿತ್ವ ನೆಹರೂ ಅವರದ್ದಾಗಿತ್ತು ಎಂದು ಸ್ಮರಿಸಿದರು.



## ಸವದತ್ತಿ ಯಲ್ಲಮ್ಮ ದೇವಿ ದರ್ಶನ ಪಡೆದ ಶಾಸಕ ಬಾಲಚಂದ್ರ ಜಾರಕಿಹೊಳಿ

ಗೋಕಾಕ: ಅರಭಾವಿ ಶಾಸಕ ಹಾಗೂ ಕಹಾಮ ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಅವರು ಸವದತ್ತಿ ಯಲ್ಲಮ್ಮ ದೇವಿ ದರ್ಶನ ಪಡೆದರು. ಶ್ರೀ ಕ್ಷೇತ್ರ ಸವದತ್ತಿ ಯಲ್ಲಮ್ಮದೇವಿ ದರ್ಶನ ಪಡೆದ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ದೀಪಾವಳಿ ಹಬ್ಬದ ನಿಮಿತ್ತ ವಿಶೇಷ ಪೂಜಾ ಕಾರ್ಯಗಳನ್ನು ನೆರವೇರಿಸಿದರು. ನಂತರ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರನ್ನು ದೇವಸ್ಥಾನದ ಅರ್ಚಕರು ಸನ್ಮಾನಿಸಿ ಗೌರವಿಸಿದರು.ಈ ಸಂದರ್ಭದಲ್ಲಿ ಅಧಿಕಾರಿಗಳು ಹಾಗೂ ದೇವಸ್ಥಾನದ ಆಡಳಿತ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

## ಕರ್ನಾಟಕದಲ್ಲಿ ಹಿಜಾಬ್ ನಿಷೇಧ ಹಿಂಪಡೆಯಿರಿ: ಕಾಂಗ್ರೆಸ್ ಗೆ ಜಮ್ಮು-ಕಾಶ್ಮೀರ ಮಾಜಿ ಸಿಎಂ ಒಮರ್ ಅಬ್ದುಲ್ಲಾ ಒತ್ತಾಯ

ಶ್ರೀನಗರ: ಕರ್ನಾಟಕದಲ್ಲಿ ಹಿಜಾಬ್ ನಿಷೇಧವನ್ನು ಹಿಂಪಡೆಯುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗುವಂತೆ ನ್ಯಾಷನಲ್ ಕಾನ್ಫರೆನ್ಸ್ ನಾಯಕ ಒಮರ್ ಅಬ್ದುಲ್ಲಾ ಮಂಗಳವಾರ ಕಾಂಗ್ರೆಸ್ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರಿಗೆ ಮನವಿ ಮಾಡಿದ್ದಾರೆ.

ಬಾರಾಮುಲ್ಲಾದಲ್ಲಿ ಪಕ್ಷದ ಕಾರ್ಯಕ್ರಮದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಸರ್ಕಾರ ಇದರಲ್ಲಿ ಏಕೆ ಮಧ್ಯಪ್ರವೇಶಿಸಬೇಕು? ಮುಸ್ಲಿಮರನ್ನು ಗುರಿಯಾಗಿಟ್ಟುಕೊಂಡು ಇಂತಹ ಆದೇಶ ಮಾಡಲಾಗಿದೆ.

ಈ ಹಿಂದೆ ಕರ್ನಾಟಕದಲ್ಲಿ ಇಂತಹ ಆದೇಶಗಳೆಲ್ಲಾ ಜಾರಿಯಾದಾಗ ಬಿಜೆಪಿ ಸರ್ಕಾರ



ಇತ್ತು. ಹೀಗಾಗಿ ನಮ್ಮಗೆ ಆಶ್ಚರ್ಯ ಏನಿಸಿರಲಿಲ್ಲ. ಆದರೆ, ಈಗ ಕಾಂಗ್ರೆಸ್ ಅಧಿಕಾರಾವಧಿಯಲ್ಲಿ ಇಂತಹ ನಿರ್ಧಾರಗಳನ್ನು ತೆಗೆದುಕೊಂಡಿರುವುದು ಬೇಸರದ ಸಂಗತಿ, ಇದು ಅತ್ಯಂತ ದುರದೃಷ್ಟಕರ ಎಂದರು.

ಕರ್ನಾಟಕದಲ್ಲಿ ಹೊರಡಿಸಿರುವ ಆದೇಶವನ್ನು ಮರುಪರಿಶೀಲಿಸುವಂತೆ, ಆ ಆದೇಶವನ್ನು ಹಿಂತೆಗೆದುಕೊಳ್ಳುವ ಕೆಲಸ ಮಾಡುವಂತೆ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರನ್ನು ವಿನಂತಿಸುತ್ತೇನೆ ಎಂದರು.

ಜಮ್ಮು ಮತ್ತು ಕಾಶ್ಮೀರದಲ್ಲಿ ಚುನಾವಣೆ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅಬ್ದುಲ್ಲಾ, ಬಿಜೆಪಿ ಜನರನ್ನು ಎದುರಿಸಲು ಸಿದ್ಧವಿಲ್ಲ. ವಿಧಾನಸಭಾ ಚುನಾವಣೆ ಬಿಡಿ, ಮುನ್ಸಿಪಲ್ ಚುನಾವಣೆ ಕೂಡ ಮುಂದೂಡಲ್ಪಟ್ಟಿದೆ, ಶ್ರೀನಗರದಲ್ಲಿ ಪುರಸಭೆ ಈಗ ಅಸ್ತಿತ್ವದಲ್ಲಿಲ್ಲ, ಜಮ್ಮು ಪುರಸಭೆಯ ಅವಧಿಯೂ ಮುಗಿಯುತ್ತಿದೆ, ಜನವರಿ ವೇಳೆಗೆ ಎಲ್ಲಾ ಪುರಸಭೆಗಳು ತಮ್ಮ ಅವಧಿಯನ್ನು ಪೂರ್ಣಗೊಳಿಸಲಿವೆ. ಜನವರಿ ನಂತರ ಪಂಚ ಮತ್ತು ಸರಪಂಚ್‌ಗಳು ಅಸ್ತಿತ್ವ ಕಳೆದುಕೊಳ್ಳಲಿದ್ದಾರೆ ಎಂದು ಹೇಳಿದರು.

## ಮಹಿಳಾ ಲ್ಯಾಬ್ ಟೆಕ್ನಿಷಿಯನ್ ಹತ್ಯೆ ಪ್ರಕರಣ ಭೇದಿಸಿದ ರಾಯಚೂರು ಪೊಲೀಸರು

ರಾಯಚೂರು: ಜಿಲ್ಲೆಯ ಹಟ್ಟಿ ಪಟ್ಟಣದಲ್ಲಿ ಮಹಿಳಾ ಲ್ಯಾಬ್ ಟೆಕ್ನಿಷಿಯನ್ ಕೊಲೆ ಪ್ರಕರಣವನ್ನು ಪೊಲೀಸರು ಭೇದಿಸಿದ್ದು, ಮಂಗಳವಾರ ಇಬ್ಬರು ಯುವಕರನ್ನು ಬಂಧಿಸಿರುವುದಾಗಿ ತಿಳಿಸಿದ್ದಾರೆ.



ಮೊದಲು ಇದು ನರಬಲಿ ಪ್ರಕರಣ ಎಂದು ಶಂಕಿಸಲಾಗಿತ್ತು. ಆದರೆ, ಮಧ್ಯವಯಸ್ಕ ಸಂತ್ರಸ್ತ ಮಹಿಳೆಯು ಇಬ್ಬರು ಕೊಲೆಗಾರರ ಪೈಕಿ ಒಬ್ಬಾತನ ಜೊತೆ ಸಂಬಂಧ ಹೊಂದಿದ್ದರು ಎಂದು ತನಿಖೆಗಳು ಬಹಿರಂಗಪಡಿಸಿವೆ.

ಬಂಧಿತರನ್ನು 23 ವರ್ಷದ ಸಮೀರ್ ಸೊಹೈಲ್ ಮತ್ತು ಮೊಹಮ್ಮದ್ ಕೈಫ್ ಎಂದು ಗುರುತಿಸಲಾಗಿದೆ.

ಪೊಲೀಸರ ಪ್ರಕಾರ, ಮಂಜುಳಾ ಅವರನ್ನು ಅಕ್ಟೋಬರ್ 26 ರಂದು ಕೊಲೆ ಮಾಡಲಾಗಿದ್ದು, ಆಕೆಯ ಮನೆಯ ಬಳಿಯೇ ಸುಟ್ಟ ಶವ ಪತ್ತೆಯಾಗಿತ್ತು.

ಕೃತ್ಯ ಎಸಗಿದ ನಂತರ ಆರೋಪಿಗಳು ಸಂತ್ರಸ್ತೆ ಮನೆಯಿಂದ 10 ಲಕ್ಷ ರೂಪಾಯಿ ನಗದು ಮತ್ತು ಚಿನ್ನಾಭರಣಗಳನ್ನು ದೋಚಿ ಮೊಹಮ್ಮದ್ ಕೈಫ್ ಕಾರಿನಲ್ಲಿ ಪರಾರಿಯಾಗಿದ್ದರು.

ಮಂಜುಳಾ ಕೆಲವು ಕಾಯಿಲೆಗಳಿಂದ ಬಳಲುತ್ತಿದ್ದು, ಸೊಹೈಲ್‌ನ ಸಹಾಯ ಕೇಳಿದ್ದರು. ಇದರ ಲಾಭ ಪಡೆದ ಆರೋಪಿಗಳು, ಪೂಜೆಯ ನೆಪದಲ್ಲಿ ಆಕೆಯನ್ನು ಪ್ರತ್ಯೇಕ ಸ್ಥಳಕ್ಕೆ ಕರೆಸಿಕೊಂಡಿದ್ದರು.

ಅವರ ನಿರ್ದೇಶನದಂತೆ ಆಕೆ ತನ್ನ ಚಿನ್ನಾಭರಣಗಳನ್ನು ತೆಗೆದುಕೊಂಡು ಹೋಗಿದ್ದರು. ನಂತರ ಅವರು ನಗದು ಮತ್ತು ಆಭರಣಗಳ ಮೇಲೆ ಸಿಂಧೂರ ಮತ್ತು ಅರಿಶಿನವನ್ನು ಹಚ್ಚಿದರು ಮತ್ತು ಆಕೆಯನ್ನು ಪ್ರಾರ್ಥಿಸುವಂತೆ ಹೇಳಿದ್ದಾರೆ.

ಆಕೆ ಪ್ರಾರ್ಥನೆಯಲ್ಲಿ ಮುಳುಗಿದ್ದಾಗ, ಇಬ್ಬರೂ ಸೇರಿ ಆಕೆಯನ್ನು ಕೊಂದು ನಂತರ ಸಮೀರ್ ಆಕೆಯ ಶವವನ್ನು ಆಕೆಯ ಮನೆಯ ಬಳಿಯೇ ಸುಟ್ಟು ಹಾಕಿದ್ದ.

ಖಚಿತ ಮಾಹಿತಿ ಮೇರೆಗೆ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದು, ಕೃತ್ಯಕ್ಕೆ ಬಳಸಿದ್ದ ಕಾರು ಹಾಗೂ ಬೈಕ್ ಜೊತೆಗೆ 7.49 ಲಕ್ಷ ನಗದು, 163 ಗ್ರಾಂ ಚಿನ್ನಾಭರಣ ವಶಪಡಿಸಿಕೊಂಡಿದ್ದಾರೆ.

## ಮತ್ತೋರ್ವ ಬಿಗ್ ಬಾಸ್ ಸ್ಪರ್ಧಿ ವಿರುದ್ಧ ಎಫ್‌ಐಆರ್



ಬೆಂಗಳೂರು: ಕನ್ನಡ ಬಿಗ್ ಬಾಸ್ ಸೀಸನ್ 10 ನಲ್ಲಿ ಮತ್ತೋರ್ವ ಬಿಗ್ ಬಾಸ್ ಸ್ಪರ್ಧಿಗೆ ಸಂಕಷ್ಟ ಎದುರಾಗಿದೆ.

ತನಿಷಾ ಕುಪ್ಪಂಡ ವಿರುದ್ಧ ಬೆಂಗಳೂರು ಹೊರವಲಯದ ಕುಂಬಳಗೋಡು ಪೊಲೀಸ್ ಠಾಣೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ (ಎಸ್‌ಸಿ/ಎಸ್‌ಟಿ) ದೌರ್ಜನ್ಯ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.

ಅಖಿಲ ಕರ್ನಾಟಕ ಬೋವಿ ಸಮಾಜದ ರಾಜ್ಯಾಧ್ಯಕ್ಷೆ ಪಿ.ಪದ್ಮ ತನಿಷಾ ಕುಪ್ಪಂದ ವಿರುದ್ಧ ದೂರು ದಾಖಲಿಸಿದ್ದಾರೆ. ಬಾಸ್ ರಿಯಾಲಿಟಿ ಶೋ ನಲ್ಲಿ ಅವಹೇಳನಕಾರಿ ಪದ ಬಳಕೆ ಮಾಡುವ ಮೂಲಕ ಬೋವಿ ಜನಾಂಗಕ್ಕೆ ನಟಿ ತನಿಷಾ ಕುಪ್ಪಂಡ ಅವಮಾನ ಮಾಡಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಇತ್ತೀಚೆಗೆ ಕನ್ನಡ ಬಿಗ್ ಬಾಸ್ ಶೋ ನ ಸ್ಪರ್ಧಿ ವರ್ತೂರು ಸಂತೋಷ್ ಅವರನ್ನು ಹುಲಿ ಉಗುರಿನ ಪೆಂಡೆಂಟ್ ಧರಿಸಿದ್ದ ಆರೋಪದಲ್ಲಿ ಬಂಧಿಸಲಾಗಿತ್ತು. ತನಿಷಾ ಕುಪ್ಪುಂಡ ವಿರುದ್ದ ದೂರು ದಾಖಲಿಸಿ ಕ್ರಮ ಕೈಗೊಂಡು ಬಿಗ್ ಬಾಸ್ ಮನೆಯಿಂದ ಹೊರ ಹಾಕಬೇಕು ಎಂದು ಆಗ್ರಹಿಸಲಾಗಿದೆ.

## ಜನಸಾಮಾನ್ಯರ ಉನ್ನತಿಗಾಗಿ ಸರ್ಕಾರ ಶ್ರಮಿಸುತ್ತಿದೆ: ಡಿಸಿಎಂ ಡಿಕೆ ಶಿವಕುಮಾರ್

ಬೆಂಗಳೂರು: ಜನಸಾಮಾನ್ಯರ ಉನ್ನತಿ ನಿಟ್ಟಿನಲ್ಲಿ ಸರ್ಕಾರ ಶ್ರಮಿಸುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ .ಕೆಪಿಸಿಸಿ ಕಚೇರಿಯಲ್ಲಿ ನಡೆದ ದೇಶದ ಮೊದಲ ಪ್ರಧಾನಿ ಪಂಡಿತ್ ಜವಹರಲಾಲ್ ನೆಹರು ಅವರ 134ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಡಿಕೆ ಶಿವಕುಮಾರ್, ನಾವು ಒಂದು ಟ್ರೆಂಡ್ ಸೃಷ್ಟಿಸಿದ್ದೇವೆ.

ಜನ ಸಾಮಾನ್ಯರ ಆರ್ಥಿಕ ಸ್ಥಿತಿಯನ್ನು ಬದಲಾಯಿಸುತ್ತಿದ್ದೇವೆ. ಎಲ್ಲಾರಿಗೂ ಸಹಾಯ ಮಾಡುತ್ತಿದ್ದೇವೆ. ಇದೇ ಕಾಂಗ್ರೆಸ್ ಸರ್ಕಾರದ ಶಕ್ತಿ ಎಂದರು.

ಭಾರತದ ಮೊದಲ ಪ್ರಧಾನಿ ಪಂಡಿತ್ ಜವಹರಲಾಲ್ ನೆಹರು ಅವರು ಇಡೀ ದೇಶದ ಸಾಮಾಜಿಕ , ಆರ್ಥಿಕ, ಶೈಕ್ಷಣಿಕ ಅಭಿವೃದ್ಧಿಗೆ ಅಡಿಪಾಯ ಹಾಕುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ.



ಮಕ್ಕಳೇ ಈ ದೇಶದ ಭವಿಷ್ಯ ಎಂದು ನಂಬಿದ್ದ ನೆಹರು ಅವರು ಮಕ್ಕಳ ಹಕ್ಕುಗಳಿಗಾಗಿ ಶ್ರಮಿಸಿ, ಪ್ರತಿ ಮಗುವೂ ತನ್ನ ಸಂಪೂರ್ಣ ಸಾಮರ್ಥ್ಯವನ್ನು ತಲುಪಲು, ದೇಶದ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಕೊಡುಗೆ ನೀಡುವ ಅವಕಾಶವನ್ನು ರೂಪಿಸಿದರು.

ನೆಹರು ಅವರ ದೂರದರ್ಶಿತ್ವ, ಪ್ರಗತಿಪರ ಚಿಂತನೆಗಳು ಇಂದಿನ ಯುವ ನಾಯಕರಿಗೆ ಮಾದರಿಯಾಗಿದೆ. ದೇಶಕ್ಕಾಗಿ ಅವರು ಮಾಡಿದ ತ್ಯಾಗ , ಸಮರ್ಪಣೆಯನ್ನು ಸ್ಮರಿಸುತ್ತಾ, ಅವರು ಹಾಕಿಕೊಟ್ಟ ಹಾದಿಯಲ್ಲೇ ನಾವೆಲ್ಲಾ ಸಾಗೋಣ ಎಂದು ತಿಳಿಸಿದರು.

ಇದಕ್ಕೂ ಮುನ್ನಾ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಜವಹರಲ್ ನೆಹರು ಅವರಿಗೆ ಗೌರವ ನಮನ ಸಲ್ಲಿಸಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, "ಭಾರತವನ್ನು ಶೂನ್ಯದಿಂದ ಉತ್ತುಂಗಕ್ಕೆ ಕೊಂಡೊಯ್ದ, ಆಧುನಿಕ ಭಾರತದ ಸೃಷ್ಟಿಕರ್ತ, ಪ್ರಜಾಪ್ರಭುತ್ವದ ನಿರ್ಭೀತ ಕಾವಲುಗಾರ ಮತ್ತು ನಮ್ಮ ಸ್ಫೂರ್ತಿಯ ಮೂಲ ಪಂಡಿತ್ ಜವಾಹರಲಾಲ್ ನೆಹರು ಎಂದು ಬಣ್ಣಿಸಿದರು.

## ವಿದ್ಯುತ್ ಕಳ್ಳತನ: ಕಾಂಗ್ರೆಸ್ ಆರೋಪಕ್ಕೆ ಎಚ್ ಡಿ ಕುಮಾರಸ್ವಾಮಿ ಸ್ಪಷ್ಟನೆ



ಬೆಂಗಳೂರು: ದೀಪಾವಳಿ ಹಬ್ಬಕ್ಕೆ ಮನೆಗೆ ದೀಪಾಲಂಕಾರ ಮಾಡಲು ವಿದ್ಯುತ್ ಕಂಬದಿಂದ ವಿದ್ಯುತ್ ಕಳ್ಳತನ ಮಾಡಿದ ಕುರಿತು ಕಾಂಗ್ರೆಸ್ ಮಾಡಿರುವ ಆರೋಪಕ್ಕೆ ಮಾಜಿ ಸಿಎಂ ಎಚ್ ಡಿ ಕುಮಾರಸ್ವಾಮಿ ಸ್ಪಷ್ಟನೆ ನೀಡಿದ್ದಾರೆ.

ಅತ್ತ ಕಾಂಗ್ರೆಸ್ ಟ್ವೀಟ್ ಬೆನ್ನಲ್ಲೇ ಇತ್ತ ಆ ಬಗ್ಗೆ ಸ್ಪಷ್ಟನೆ ನೀಡಿ ಟ್ವೀಟ್ ಮಾಡಿರುವ ಕುಮಾರಸ್ವಾಮಿ, 'ದೀಪಾವಳಿ ಹಬ್ಬಕ್ಕೆ ನನ್ನ ಮನೆಗೆ ವಿದ್ಯುತ್ ದೀಪಗಳ ಅಲಂಕಾರ ಮಾಡಲು ಖಾಸಗಿ ಡೆಕೋರೇಟರ್ ಒಬ್ಬರಿಗೆ ಹೇಳಲಾಗಿತ್ತು. ಅವರು ಮನೆಗೆ ವಿದ್ಯುತ್ ದೀಪಗಳ ಅಲಂಕಾರ ಮಾಡಿದ ಮೇಲೆ ಪಕ್ಕದಲ್ಲಿಯೇ ಇದ್ದ ಕಂಬದಿಂದ ವಿದ್ಯುತ್ ಸಂಪರ್ಕ ಪಡೆದು ಪರೀಕ್ಷೆ ಮಾಡಿದ್ದಾರೆ. ಆಗ ನಾನು ಬಿಡದಿಯ ತೋಟದಲ್ಲಿದ್ದೆ. ನಿನ್ನೆ ರಾತ್ರಿ ಮನೆಗೆ ವಾಪಸ್ ಬಂದಾಗ ಈ ವಿಷಯ ನನ್ನ ಗಮನಕ್ಕೆ ಬಂತು.

ತಕ್ಷಣ ಅದನ್ನು ತೆಗೆಸಿ ಮನೆಯ ಮೀಟರ್ ಬೋರ್ಡ್ ನಿಂದಲೇ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಮಾಡಿದ್ದೇನೆ.

ಇದು ವಾಸ್ತವ ಸ್ಥಿತಿ. ಇದರಲ್ಲಿ ಮುಚ್ಚುಮರೆ ಏನೂ ಇಲ್ಲ. ಈ ಅಚಾತುರ್ಯಕ್ಕೆ ನನ್ನ ವಿಷಾದವಿದೆ. ಬೆಸ್ಕಾಂ ಅಧಿಕಾರಿಗಳು ಬಂದು ಪರೀಕ್ಷೆ ಮಾಡಿ ನೋಟಿಸ್ ನೀಡಲಿ. ದಂಡ ಕಟ್ಟುತ್ತೇನೆ ಎಂದು ಟ್ವೀಟ್ ಮಾಡಿದ್ದಾರೆ.

ಅಂತೆಯೇ ಇದೇ ವೇಳೆ ಕಾಂಗ್ರೆಸ್ ಬಗ್ಗೆ ಕಿಡಿಕಾರಿರುವ ಎಚ್ ಡಿ ಕುಮಾರಸ್ವಾಮಿ, ಇದನ್ನೇ ಕಾಂಗ್ರೆಸ್ ದೊಡ್ಡದು ಮಾಡಿ ಪ್ರಚಾರ ಗಿಟ್ಟಿಸುವ ಕೆಲಸ ಮಾಡುತ್ತಿದೆ. ಆ ಪಕ್ಷದ ಕ್ಷುಲ್ಲಕ ಮನಃಸ್ಥಿತಿಯ ಬಗ್ಗೆ ನನಗೆ ಮರುಕ ಇದೆ. ನಾನೇನು ರಾಜ್ಯದ ಆಸ್ತಿ ಕಬಳಿಸಿಲ್ಲ.

ಕಂಡವರ ಭೂಮಿಗೆ ಬೇಲಿ ಹಾಕಿಲ್ಲ. ಇನ್ನೊಬ್ಬರ ರಕ್ತ ಕುಡಿದು ಧನದಾಹ ತೀರಿಸಿಕೊಂಡಿಲ್ಲ. ಕುಮಾರಸ್ವಾಮಿ ವಿದ್ಯುತ್ ಕಳ್ಳತನ ಮಾಡಿದ್ದಾರೆ,

ಬೆಸ್ಕಾಂ ಕ್ರಮ ಕೈಗೊಳ್ಳಲಿ ಎಂದು ಉಪ ಮುಖ್ಯಮಂತ್ರಿಗಳು ಹೇಳಿದ್ದಾರೆ. ನಾನು ಮನೆಯಲ್ಲೇ ಇದ್ದೇನೆ. ಬೆಸ್ಕಾಂ ಅಧಿಕಾರಿಗಳು ಬರಲಿ. ಅವರ ಯಾವುದೇ ಕ್ರಮಕ್ಕೆ ನಾನು ಸಿದ್ಧನಿದ್ದೇನೆ ಎಂದು ಟ್ವೀಟ್ ಮಾಡಿದ್ದಾರೆ.

## ಭೋವಿ ನಿಗಮದ ಮಾಜಿ ಎಂಡಿ, ಸಿಬ್ಬಂದಿಗಳಿಂದ 97 ಕೋಟಿ ರೂಪಾಯಿ ದುರುಪಯೋಗ: ಸಿಐಡಿ ವರದಿ ಸಲ್ಲಿಕೆ

ಬೆಂಗಳೂರು: ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ (KBDC) ಉದ್ಯೋಗ ಯೋಜನೆಯಡಿ ರಾಜ್ಯ ಸರ್ಕಾರ ನೀಡಿದ್ದ 97 ಕೋಟಿ ರೂಪಾಯಿಗೂ ಅಧಿಕ ಮೊತ್ತ ಹಣವನ್ನು 500 ಮಂದಿ ಫಲಾನುಭವಿಗಳ ಹೆಸರಿನಲ್ಲಿ ಅಕ್ರಮವಾಗಿ ಬಳಕೆ ಮಾಡಲಾಗಿದೆ ಎಂದು ಅಪರಾಧ ತನಿಖಾ ಇಲಾಖೆ (CID) ನಗರ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯಕ್ಕೆ ವರದಿ ಸಲ್ಲಿಸಿದೆ.

ಆರೋಪಿಗಳಾದ ಮಾಜಿ ವ್ಯವಸ್ಥಾಪಕ ನಿರ್ದೇಶಕಿ ಆರ್ಲೀಲಾವತಿ ಡಾ.ಬಿ.ಕೆ.ನಂಜಪ್ಪ, ಪ್ರಧಾನ ವ್ಯವಸ್ಥಾಪಕ ಪಿ.ಡಿ.ಸುಬ್ಬಪ್ಪ, ಕಚೇರಿ ಅಧೀಕ್ಷಕ ಮತ್ತು ಬೆಂಗಳೂರಿನ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಇತರ ಸಿಬ್ಬಂದಿ ಹಣ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಸಿಐಡಿ ವರದಿಯಲ್ಲಿ ತಿಳಿಸಿದೆ.

ಆರೋಪಿಗಳು ಉದ್ಯೋಗ ಯೋಜನೆಯ ಫಲಾನುಭವಿಗಳ ಸಹಿಯನ್ನು ಆರ್ ಟಿಜಿಎಸ್ ನಮೂನೆಗಳಲ್ಲಿ ತೆಗೆದುಕೊಂಡು ಅವರ ಬ್ಯಾಂಕ್ ಖಾತೆಗಳಿಗೆ ತಲಾ 5 ಲಕ್ಷದಿಂದ 10 ಲಕ್ಷ ರೂಪಾಯಿಗಳವರೆಗೆ ವರ್ಗಾಯಿಸಿದ್ದಾರೆ.

ಅವರು ತಮ್ಮ ಒಡೆತನದ ಸೋಮನಾಥೇಶ್ವರ ಎಂಟರ್‌ಪ್ರೈಸಸ್, ಹರಿಣಿತಾ ಎಂಟರ್‌ಪ್ರೈಸಸ್, ಅಂಶಿಕಾ ಎಂಟರ್‌ಪ್ರೈಸಸ್ ಮತ್ತು ನ್ಯೂ ಡ್ರೀಮ್ಸ್ ಎಂಟರ್‌ಪ್ರೈಸಸ್‌ನಂತಹ ಕಂಪನಿಗಳಿಗೆ ಅಪಾರ ಪ್ರಮಾಣದ ಹಣವನ್ನು ವರ್ಗಾಯಿಸಿದ್ದಾರೆ.

ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್‌ನಲ್ಲಿ (IISC) ಕೆಲಸ ಮಾಡುತ್ತಿರುವ ಆರ್ ಮಂಗಳಾ ಅವರು



ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿಗೆ ಪ್ರತಿಕ್ರಿಯೆಯಾಗಿ 51ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಯಶವಂತ್ ಕುಮಾರ್ ಅವರ ಮುಂದೆ ವರದಿ ಸಲ್ಲಿಸಲಾಯಿತು. ಈಕೆ ಪ್ರಕರಣದ ಪ್ರಮುಖ ಆರೋಪಿ ಲೀಲಾವತಿ ಸಹೋದರಿ. ಬೆಂಗಳೂರಿನ ಐಐಎಸ್ಸಿಯಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿರುವ ಮಂಗಳಾ ಅವರ ಖಾತೆಗೆ ಅನ್ನಿಕಾ ಎಂಟರ್‌ಪ್ರೈಸಸ್, ಹರ್ನಿತಾ ಕ್ರಿಯೇಷನ್ಸ್, ನ್ಯೂ ಡ್ರೀಮ್ಸ್ ಎಂಟರ್‌ಪ್ರೈಸಸ್ ಮತ್ತು ಸೋಮನಾಥೇಶ್ವರ ಎಂಟರ್‌ಪ್ರೈಸಸ್‌ನಿಂದ 91 ಲಕ್ಷ ರೂಪಾಯಿ ಜಮೆಯಾಗಿದೆ.

ಮಂಗಳಾ ಅವರು ಕೆಬಿಡಿಸಿಯೊಂದಿಗೆ ಯಾವುದೇ ರೀತಿಯಲ್ಲಿ ಸಂಬಂಧ ಹೊಂದಿಲ್ಲ ಎಂದು ವಾದಿಸಿದರು. ಸಿಐಡಿ ಸಲ್ಲಿಸಿದ ವರದಿಯನ್ನು ಪರಿಗಣಿಸಿದ ನ್ಯಾಯಾಲಯ ಮಂಗಳಾ ಅವರ ನಿರೀಕ್ಷಣಾ ಜಾಮೀನು ಅರ್ಜಿಯನ್ನು ತಿರಸ್ಕರಿಸಿದೆ.

ಕೊರೋನಾ ಸಾಲ: ತಿಮ್ಮಯ್ಯ ಮತ್ತು ಶಶಾಂಕ್ ವಿರುದ್ಧ ತಿಪ್ಪಣ್ಣ ಎಂಬವರು ನೀಡಿದ ದೂರಿನ ಆಧಾರದ ಮೇಲೆ ಕಲಬುರಗಿ ಜಿಲ್ಲೆಯ ಕಾಳಗಿ ಪೊಲೀಸರು 2022 ರಲ್ಲಿ ಪ್ರಕರಣ ದಾಖಲಿಸಿದ್ದರು. ಫೆಬ್ರವರಿ 2022 ರಲ್ಲಿ, ತಿಮ್ಮಯ್ಯ ಅವರು ದೂರುದಾರರನ್ನು ಮತ್ತು ಇತರ 19 ಜನರನ್ನು ಭೇಟಿ ಮಾಡಿದರು. ಯಾದಗಿರಿಯಲ್ಲಿರುವ ಯೆಸ್ ಬ್ಯಾಂಕ್‌ನ ಶಾಖೆಯಿಂದ ತಲಾ 30,000 ರೂಪಾಯಿಗಳ ಕೊರೋನಾ ಸಾಲ ಪಡೆಯಲು ಸಹಾಯ ಮಾಡುವುದಾಗಿ ಭರವಸೆ ನೀಡಿ ಅವರ ಆಧಾರ್ ಕಾರ್ಡ್‌ಗಳು, ಚುನಾವಣಾ ಐಡಿಗಳು, ಪ್ಯಾನ್ ಕಾರ್ಡ್‌ಗಳು ಮತ್ತು ಭಾವಚಿತ್ರಗಳನ್ನು ತೆಗೆದುಕೊಂಡಿದ್ದರು.

ತಿಮ್ಮಯ್ಯ ಸಾಲದ ಪತ್ರಗಳು ಮತ್ತು ಖಾಲಿ ಕಾಗದಗಳ ಮೇಲೆ ಅವರ ಸಹಿ ಮತ್ತು ಹೆಬ್ಬೆರಳಿನ ಗುರುತುಗಳನ್ನು ಪಡೆದರು. ಸಾಲದ ಮೊತ್ತವನ್ನು ಪಡೆಯಲು ಹೊಸ ಸಿಮ್ ಕಾರ್ಡ್‌ಗಳನ್ನು ಖರೀದಿಸಬೇಕು ಎಂದು ಅವರು ಅವರಿಗೆ ತಿಳಿಸಿದರು. ಅವರು ಸಿಮ್ ಕಾರ್ಡ್‌ಗಳನ್ನು ಖರೀದಿಸಿ ಅವರಿಗೆ ನೀಡಿದರು. ನಂತರ, ಯೆಸ್ ಬ್ಯಾಂಕ್‌ನಿಂದ ತಲಾ 10 ಲಕ್ಷ ರೂಪಾಯಿ ಸಾಲವನ್ನು ಮಂಜೂರು ಮಾಡಲಾಗಿದೆ ಎಂದು ಸಮುದಾಯದ ಮುಖಂಡರೊಬ್ಬರು ಮಾಹಿತಿ ನೀಡಿದರು.

ಬೆಂಗಳೂರಿನ ಕೆಬಿಡಿಸಿ ಕಚೇರಿಯನ್ನು ಸಂಪರ್ಕಿಸಿದಾಗ ಅವರ ಬ್ಯಾಂಕ್ ಖಾತೆಗೆ ಹಣ ಜಮೆಯಾಗಿದ್ದು, ನಂತರ ಸೋಮನಾಥೇಶ್ವರ ಎಂಟರ್‌ಪ್ರೈಸಸ್ ಖಾತೆಗೆ ಹಣ ವರ್ಗಾವಣೆಯಾಗಿರುವುದು ಕಂಡುಬಂದಿದೆ.





# ರೈಲ್ವೆ ಸಚಿವಾಲಯ ಆದೇಶ : ವಂದೇ ಭಾರತ್ ಎಕ್ಸ್ಪ್ರೆಸ್ ರೈಲು ಬೆಳಗಾವಿವರೆಗೆ ವಿಸ್ತರಣೆ



ಮೂಡಲಗಿ: ಜಿಲ್ಲೆಯ ಜನರ ಬಹು ದಿನಗಳ ಬೇಡಿಕೆಯಾದ ವಂದೇ ಭಾರತ್ ಎಕ್ಸ್ಪ್ರೆಸ್ ರೈಲನ್ನು ಬೆಂಗಳೂರು ಧಾರವಾಡದಿಂದ ಬೆಳಗಾವಿಯವರೆಗೆ ವಿಸ್ತರಣೆ ಮಾಡಿ ರೈಲ್ವೆ ಸಚಿವಾಲಯ ಆದೇಶ ನೀಡಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಮಂಗಳವಾರ ನ. 14 ರಂದು ಪತ್ರಿಕಾ ಹೇಳಿಕೆ ನೀಡಿದ ಅವರು ವಂದೇ ಭಾರತ್ ಎಕ್ಸ್ಪ್ರೆಸ್ ರೈಲು ಬೆಂಗಳೂರಿನಿಂದ ರೈಲು ಸಂಖ್ಯೆ (20661) ಬೆಳಿಗ್ಗೆ 05-45 ಕ್ಕೆ ಬೆಂಗಳೂರು ನಿಲ್ದಾಣದಿಂದ ಹೊರಟು ಮಧ್ಯಾಹ್ನ 01-30 ಕ್ಕೆ ಬೆಳಗಾವಿ ತಲುಪಲಿದೆ.

ಬೆಳಗಾವಿಯಿಂದ ರೈಲು ಸಂಖ್ಯೆ (20662) ಮಧ್ಯಾಹ್ನ 12-00 ಕ್ಕೆ ಬೆಳಗಾವಿಯಿಂದ ಹೊರಟು ರಾತ್ರಿ 10-10 ಕ್ಕೆ ಬೆಂಗಳೂರು ನಿಲ್ದಾಣ ತಲುಪಲಿದೆ.

ಶ್ರೀಘ್ರದಲ್ಲಿ ವಂದೇ ಭಾರತ್ ಎಕ್ಸ್ಪ್ರೆಸ್ ರೈಲು ಸಂಚಾರದ ದಿನಾಂಕ ನಿಗದಿಯಾಗಲಿದೆ. ನನ್ನ ಮನವಿಗೆ ಸ್ಪಂದಿಸಿ ಶೀಘ್ರ ರೈಲಿನ ವ್ಯವಸ್ಥೆ ಮಾಡಿದ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಅವರಿಗೆ ಹಾಗೂ ರೈಲ್ವೆ ಇಲಾಖೆಗೆ ಈ ಮೂಲಕ ಧನ್ಯವಾದಗಳನ್ನು ತಿಳಿಸಿದ್ದಾರೆ.

# ಆನ್ಲೈನ್ ವಂಚನೆ ಆರೋಪಿಗಳು ಪೊಲೀಸ್ ವಶಕ್ಕೆ



ವಿಜಯಪುರ: ಆನ್ಲೈನ್‌ನಲ್ಲಿ ಉದ್ಯಮಿಗೆ ವಂಚಿಸಿದ ಮೂವರು ನೈಜೀರಿಯಾ ದೇಶದ ಪ್ರಜೆಗಳನ್ನು ವಿಜಯಪುರ ನಗರದಲ್ಲಿ ಬಂಧಿಸಲಾಗಿದೆ. ಪೀಟರ್, ಹ್ಯಾಪಿ, ಓಬಿನ್ನಾ ಸ್ಟಾಲೀನ್ ಬಂಧಿತ ಆರೋಪಿಗಳು.

ನಗರದ ಉದ್ಯಮಿಯೊಬ್ಬರಿಗೆ 59,12,765 ನಗದು ವಂಚನೆ ಮಾಡಿದ್ದರು. ಇನ್ನೂ ಕ್ರಿಪ್ಟೋ ಮೈನಿಂಗ್ ಮೂಲಕ ಹಣ ಹೂಡಿಕೆ ಮಾಡಿದ್ರೇ 20% ಲಾಭಾಂಶ ಪಡೆಯಬಹುದು ಎಂದು ಆರೋಪಿಗಳು ನಂಬಿಸಿ, ನಗದು ವಂಚಿಸಿದ್ದಾರೆ.

ಇದನ್ನು ಗಂಭೀರವಾಗಿ ಪರಿಗಣಿಸಿದ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಬಂಧಿತರಿಂದ 21 ಮೊಬೈಲ್, 18 ಸೀಮ್‌ಗಳು, ಒಂದು ಲ್ಯಾಪ್‌ಟಾಪ್, ಎರಡು ಪೇನ್‌ಡ್ರೈವ್, ಒಂದು ಡೊಂಗಲ, ಎರಡು ಎಟಿಎಂ ವಶಕ್ಕೆ ಪಡೆದುಕೊಂಡಿದ್ದಾರೆ. ಈ ಕುರಿತು ವಿಜಯಪುರ ಸಿಇಒ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಉದ್ಯೋಗದ ಸ್ಥಳದಲ್ಲಿ ಮಾನಸಿಕ ಆರೋಗ್ಯ

ರಾಘವ 35 ವರ್ಷ ವಯಸ್ಸಿನ ಯುವಕ, ಕಾರ್ಪೊರೇಟ್ ಕಂಪೆನಿಯೊಂದರಲ್ಲಿ ಉದ್ಯೋಗದಲ್ಲಿದ್ದಾರೆ. ಅವರು ತುಂಬಾ ಬುದ್ಧಿವಂತ, ಲವಲವಿಕೆಯ ವ್ಯಕ್ತಿ, ಆದರೆ ಕಳೆದ ಆರು ತಿಂಗಳುಗಳಿಂದ ಉದ್ಯೋಗ ನಿರ್ವಹಿಸಲು ಕಷ್ಟಪಡುತ್ತಿದ್ದಾರೆ. ಪ್ರತೀ ದಿನ ಬೆಳಗ್ಗೆ ಹಾಸಿಗೆಯಿಂದ ಎದ್ದು ಪ್ರಾತಃ ರ್ವಿಧಿಗಳನ್ನು ಪೂರೈಸಿ ಕೆಲಸಕ್ಕೆ ಹೋಗುವುದು ಅವರಿಗೆ ಒಂದು ಸವಾಲೇ ಆಗಿಬಿಟ್ಟಿದೆ.

ತಾನು ಮಾಡಬೇಕಾಗಿರುವ ಕೆಲಸಗಳ ಬಗ್ಗೆ ಆಲೋಚಿಸಿದಾಗ ಅವರಿಗೆ ಸಾಕೋ ಸಾಕು ಅನ್ನಿಸುತ್ತದೆ ಮತ್ತು ಕೊನೆಗೆ ಯಾವುದೂ ಬೇಡ ಅನ್ನಿಸುತ್ತದೆ. ಇವತ್ತಲ್ಲ ನಾಳೆ ಮ್ಯಾನೇಜರ್ ನಿಂದ ತನಗೆ ಬೈಗುಳ ಕಾದಿದೆ ಎಂದು ಆತಂಕಗೊಳ್ಳುತ್ತಾರೆ. ಉದ್ಯೋಗಕ್ಕೆ ರಾಜೀನಾಮೆ ಎಸೆದುಬಿಡಬೇಕು ಎಂದು ಆಗಾಗ ಅವರಿಗೆ ಅನ್ನಿಸುತ್ತದೆ; ಆದರೆ ಪಾವತಿಸಬೇಕಾಗಿರುವ ಸಾಲದ ಕಂತಿನ ನೆನಪಾಗಿ ವಿಧಿಯಿಲ್ಲದೆ ಮತ್ತೆ ಕೆಲಸಕ್ಕೆ ಹೊರಡುತ್ತಾರೆ.

ಇದು ರಾಘವ ಒಬ್ಬರದೇ ಕಥೆಯಲ್ಲ. ನಮ್ಮ ನಮ್ಮ ಸನ್ನಿವೇಶಗಳನ್ನು ಆಧರಿಸಿ ವಿವಿಧ ಉದ್ಯೋಗಗಳಲ್ಲಿ ತೊಡಗಿರುವ ನಮ್ಮೆಲ್ಲರಿಗೂ ಯಾವಾಗದರೊಮ್ಮೆ ಅಥವಾ ಆಗಾಗ ಇಂತಹುದೇ ಅನುಭವ ಆಗಿರುತ್ತದೆ. ಇಂಥ ಅನುಭವಕ್ಕೆ ಒಳಗಾಗಲು ಹಲವು ಕಾರಣಗಳು ಇರಬಹುದು; ಆದರೆ ಒಂದು ಸತ್ಯಾಂಶ ಎಂದರೆ ಇಂತಹ ಆಲೋಚನೆ ಪದೇಪದೆ ಮೂಡುವುದು ನಮ್ಮ ಮಾನಸಿಕ



ಆರೋಗ್ಯಕ್ಕೆ ಒಳ್ಳೆಯದಲ್ಲ.

ಉದ್ಯೋಗವು ವಯಸ್ಕರ ಬದುಕಿನ ಅವಿಭಾಜ್ಯ ಅಂಗವಾಗಿದೆ ಮತ್ತು ಉದ್ಯೋಗಸ್ಥರಾಗಿರುವ ಎಲ್ಲರೂ ಪ್ರಾಯಃ ತಮ್ಮ ತಮ್ಮ ಮನೆಗಳಲ್ಲಿ ಸುಖವಾಗಿ ಕಾಲ ಕಳೆಯುವುದಕ್ಕಿಂತ ಹೆಚ್ಚು ಸಮಯವನ್ನು ಕಚೇರಿಗಳಲ್ಲಿ ಕಳೆಯುತ್ತಾರೆ. ಪ್ರತೀ ದಿನ ನಾವು ಕನಿಷ್ಠ ಎಂಟು ತಾಸುಗಳನ್ನು ಉದ್ಯೋಗ ಸ್ಥಳದಲ್ಲಿ ಮತ್ತು ಇನ್ನೊಂದಿಷ್ಟು ಸಮಯವನ್ನು ಕಚೇರಿಗೆ ಪ್ರಯಾಣ ಅವಧಿಯಾಗಿ ವ್ಯಯಿಸುತ್ತೇವೆ.

ಬಹುತೇಕ ವಯಸ್ಕರು ಬರೇ ಆದಾಯ ಗಳಿಸುವುದಕ್ಕೆ ಮಾತ್ರವಲ್ಲದೆ ಉತ್ಪಾದಕ ಸಾಮರ್ಥ್ಯವನ್ನು ಉಳಿಸಿಕೊಳ್ಳುವುದಕ್ಕಾಗಿಯೂ ಮಾನಸಿಕ ಆರೋಗ್ಯ ಉದ್ಯೋಗ ನಿರ್ವಹಿಸಬೇಕಾಗುತ್ತದೆ. ನಮ್ಮ ಉದ್ಯೋಗಸ್ಥ ಜೀವನವು ನಮ್ಮ ನಮ್ಮ ಕುಟುಂಬಕ್ಕೆ ಮಾತ್ರವಲ್ಲದೆ ಸಮಾಜಕ್ಕೂ ಕೊಡುಗೆಯನ್ನು ನೀಡುತ್ತದೆ.

ಸಾಮಾನ್ಯವಾಗಿ ಜನರನ್ನು ಅವರ ಉದ್ಯೋಗದಿಂದ ಪ್ರಾಪ್ತವಾಗುವ ಔದ್ಯೋಗಿಕ ಸ್ಥಾನಮಾನ, ಆದಾಯ, ಸಾಮಾಜಿಕ ಸ್ಥಿತಿಗತಿಗಳಿಂದ ಅಳೆಯಲಾಗುತ್ತದೆ. ಉದ್ಯೋಗ ನಿರ್ವಹಿಸುವ ಸಾಮರ್ಥ್ಯವುಳ್ಳವರಾಗಿರುವುದು ನಮಗೆ ಆತ್ಮವಿಶ್ವಾಸವನ್ನು ಮತ್ತು ನಾವು ಸಮರ್ಥರು ಎಂಬ ಆತ್ಮಗೌರವವನ್ನು ಒದಗಿಸಿಕೊಡುತ್ತದೆ.

ನಮ್ಮ ಮಾನಸಿಕ ಆರೋಗ್ಯದ ಮೇಲೆ ಹೇಗೆ ಪರಿಣಾಮ ಬೀರಬಲ್ಲುದು? ಸಾಮಾನ್ಯವಾಗಿ ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗಿನ ಒತ್ತಡದ ವಾತಾವರಣ ಇದ್ದೇ ಇರುತ್ತದೆ. ನಿರ್ದಿಷ್ಟ ಅಂತಿಮ ಗಡುವುಗಳ ಒಳಗೆ ನಮಗೆ ವಹಿಸಿದ ಜವಾಬ್ದಾರಿಗಳನ್ನು ಪೂರ್ಣಗೊಳಿಸಬೇಕಾದ ಸಂದರ್ಭ ಇರುವಾಗ ಒಂದಷ್ಟು ಪ್ರಮಾಣದ ಒತ್ತಡ ಉಂಟಾಗುತ್ತದೆ. ಕೆಲವೊಮ್ಮೆ ನಮಗೆ ವಹಿಸಲಾದ ಹೊಣೆಗಾರಿಕೆಯು ನಮ್ಮ ನಮ್ಮ ಕೌಶಲ ಮಿತಿಗಿಂತ ಹೆಚ್ಚಿನದ್ದಾಗಿದ್ದು, ನಿರೀಕ್ಷೆಯನ್ನು ಪೂರೈಸುವಲ್ಲಿ ಶ್ರಮಿಸಬೇಕಾದಾಗ ಹತಾಶೆ ಉಂಟಾಗಬಲ್ಲುದು.

ಮೇಲಧಿಕಾರಿಗಳಾಗಿರಲಿ, ಕಿರಿಯ ಸಹೋದ್ಯೋಗಿಗಳಾಗಿರಲಿ ಅಥವಾ ಸಮಾನ ಹುದ್ದೆಯವರಿರಲಿ; ಆಗಾಗ ತಪ್ಪಭಿಪ್ರಾಯ ಅಥವಾ ವಾದವಿವಾದಗಳು ನಡೆಯುತ್ತಿದ್ದರೆ ಸಹೋದ್ಯೋಗಿಗಳ ಜತೆಗೆ ಸಂಬಂಧವು ಕೂಡ ಒತ್ತಡವನ್ನು ಉಂಟು ಮಾಡುತ್ತದೆ. ಕಚೇರಿಯ ವಾತಾವರಣವು ವಿಷಮವಾಗಿದ್ದು, ಗುಂಪುಗಾರಿಕೆಯಿಂದಾಗಿ ಉದ್ಯೋಗಿಯೊಬ್ಬ ತಿರಸ್ಕೃತನಾಗಬಹುದು; ಇದು ಆತನ ಮಾನಸಿಕ ಆರೋಗ್ಯದ ಮೇಲೆ ತುಂಬಾ ಪ್ರತಿಕೂಲ ಪರಿಣಾಮವನ್ನು ಬೀರಬಲ್ಲುದು.

ನಮ್ಮ ಆರೋಗ್ಯ ಸಮಸ್ಯೆಗಳು ಅಥವಾ ವೈಯಕ್ತಿಕ ಸ್ಥಿತಿಗತಿಗಳಿಂದಾಗಿ ಕೆಲವೊಮ್ಮೆ ಉದ್ಯೋಗದ ಮೇಲೆ ಗಮನ ಕೇಂದ್ರೀಕರಿಸಲು ಅಸಾಧ್ಯವಾಗಿ ಅದರಿಂದ ತಪ್ಪುಗಳು ಉಂಟಾಗಬಹುದು ಹಾಗೂ ಇದರ ಪರಿಣಾಮವಾಗಿ ಮ್ಯಾನೇಜರ್‌ಗಳು ನಮ್ಮತ್ತ ಬೊಟ್ಟು ಮಾಡುವಂತೆ ಆಗಬಹುದು. ಇದರ ಪರಿಣಾಮವಾಗಿ ಭಡ್ತಿಯ ಅವಕಾಶಗಳನ್ನು ಕಳೆದುಕೊಳ್ಳಬಹುದು ಹಾಗೂ ಮೇಲಧಿಕಾರಿಗಳು ಮತ್ತು ಸಹೋದ್ಯೋಗಿಗಳಿಂದ ಋಣಾತ್ಮಕ ಅಭಿಪ್ರಾಯಗಳು ಹೊರಬೀಳಬಹುದು.

ಅತಿಯಾದ ನಿರೀಕ್ಷೆಗಳು ಮತ್ತು ಕಿರಿದಾದ ಅಂತಿಮ ಗಡುವುಗಳಿಂದ ಉದ್ಯೋಗಿಗಳ ಮೇಲೆ ಅತಿಯಾದ ಒತ್ತಡ ಉಂಟಾಗಬಹುದು ಮತ್ತು ದೀರ್ಘಾವಧಿಯಲ್ಲಿ ಉತ್ಪಾದಕತೆಯ ಮೇಲೆ ನಕಾರಾತ್ಮಕ ಪರಿಣಾಮ ಉಂಟಾಗಬಹುದು. ಇನ್ನೊಂದೆಡೆ, ಕೆಲಸದಲ್ಲಿ ಹೆಚ್ಚೇನೂ ಸವಾಲುಗಳು ಇಲ್ಲದೆ ಇರುವುದು ಮತ್ತು ಕೆಲಸ ಕಡಿಮೆ ಇರುವುದರಿಂದ ಉದ್ಯೋಗಿಯಲ್ಲಿ ಆಲಸ್ಯ ತಲೆದೋರಬಹುದು ಮತ್ತು ತಾನು ಯಾವುದೇ ರೀತಿಯಲ್ಲಿ ಕೊಡುಗೆ ನೀಡುತ್ತಿಲ್ಲ ಎಂಬ ಭಾವನೆ ಉಂಟಾಗಬಹುದು.

ಇಂತಹ ಔದ್ಯೋಗಿಕ ಪರಿಸರವು ಅವರಿಗೆ ಯಾವುದೇ ರೀತಿಯಲ್ಲಿ ಉತ್ತೇಜನದಾಯಕವಾಗಿರುವುದಿಲ್ಲ. ಇವೆರಡರಲ್ಲಿ ಯಾವುದೇ ಆಗಿರಲಿ; ಉದ್ಯೋಗಿಯು ಕೆಲಸದ ಬಗ್ಗೆ ತೃಪ್ತನಾಗಿಲ್ಲದೆ ಇದ್ದರೆ ಅಥವಾ ಸಂತೋಷ ಹೊಂದಿರದೆ ಇದ್ದರೆ "ಮೌನ ಹಿಂಜರಿಕೆ' ಎಂಬ ವಿದ್ಯಮಾನಕ್ಕೆ ಕಾರಣವಾಗಬಹುದು. ಇಲ್ಲಿ ಉದ್ಯೋಗಿಯು ದೈಹಿಕವಾಗಿ ಕೆಲಸದ ಸ್ಥಳದಲ್ಲಿ ಉಪಸ್ಥಿತನಿರುತ್ತಾನೆ; ಆದರೆ ಮಾನಸಿಕವಾಗಿ ಆತ ಕೆಲಸದಲ್ಲಿ ತೊಡಗಿಕೊಂಡಿರುವುದಿಲ್ಲ. ಇಂಥವರು ಯಾವುದೇ ರೀತಿಯಲ್ಲಿ ಮುಂದಾಳ್ತನ ವಹಿಸುವುದಿಲ್ಲ, ಅಸಡ್ಡೆ ಹೊಂದಿರುತ್ತಾರೆ ಮತ್ತು ಬಹಳ ಕಹಿ, ಉದಾಸೀನ, ಸಾಕೋ ಸಾಕು ಎಂಬ ಭಾವ ಹೊಂದಿರುತ್ತಾರೆ. ಇದು ಯಾವುದೇ ರೀತಿಯ ಔದ್ಯೋಗಿಕ ಪರಿಸರಕ್ಕೆ ಅತ್ಯಂತ ಅಪಾಯಕಾರಿಯಾಗಿದ್ದು, ಇತರ ಉದ್ಯೋಗಿಗಳಿಗೂ ಸೋಂಕುರೋಗದಂತೆ ಹರಡುತ್ತದೆ.

# ಕಡಲೆಬೀಜ ತಿನ್ನಿ, ಈ ಆರೋಗ್ಯ ಸಮಸ್ಯೆಗಳಿಗೆ ಬಾಯ್..ಬಾಯ್ ಹೇಳಿ!

ಅನೇಕ ಜನರು ಖಾಲಿ ಇರುವ ಸಮಯದಲ್ಲಿ ತಮ್ಮ ಬೇಸರ ಹೋಗಲಾಡಿಸಲು ಕಡಲೆಬೀಜ ತಿನ್ನುವುದಿ ರೂಢಿ. ಬಸ್‌ನಲ್ಲಿ ಪ್ರಯಾಣಿಸುವಾಗ, ಕೆಲಸ ಮಾಡುವ, ಕಾಲಿ ಕೂತಿರುವಾಗ, ಏನಾದರೂ ತಿನ್ನಬೇಕೆನಿಸಿದಾಗ ಥಟ್ ಅಂತ ನೆನಪಿಗೆ ಬರೋದೆ ಕಡಲೆಬೀಜ. ಈ ಪದಾರ್ಥ ಸೇವನೆಯಿಂದ ನಿಮಗೆ ಪ್ರೋಟೀನ್, ಆರೋಗ್ಯಕರ ಕೊಬ್ಬುಗಳು, ಫೈಬರ್, ವಿಟಮಿನ್‌ಗಳು, ಬಿ ವಿಟಮಿನ್‌ಗಳು ಮತ್ತು ವಿಟಮಿನ್ ಇ ನಂತಹ ಖನಿಜಗಳು ಸಿಗುತ್ತವೆ. ಇದರಿಂದ ಅನೇಕ ಅನಾರೋಗ್ಯ ಸಮಸ್ಯೆಗಳು ದೂರವಾಗುತ್ತವೆ.

**ದೃಷ್ಟಿ ಸುಧಾರಣೆ:** ಕಣ್ಣುಗಳು ದುರ್ಬಲವಾಗದಿರಲು ಕಡಲೆಬೀಜವನ್ನು ಆಹಾರದಲ್ಲಿ ಸೇರಿಸುವುದು ಒಳ್ಳೆಯದು. ಇದು ವಿಟಮಿನ್ ಎ ಅನ್ನು ಉತ್ಪಾದಿಸಲು ಸಹಾಯ ಮಾಡುತ್ತದೆ. ದೃಷ್ಟಿ ದೋಷ ಇದ್ದರೆ ನಿವಾರಣೆಯಾಗುತ್ತದೆ.

**ಮೂಳೆ ಬಲಪಡಿಸುತ್ತದೆ:** ನಿಮ್ಮ ಮೂಳೆಗಳನ್ನು ಬಲಪಡಿಸಲು ಕಡಲೆಬೀಜ ತಿನ್ನಿರಿ. ಮ್ಯಾಂಗನೀಸ್ ಮತ್ತು ರಂಜಕದಲ್ಲಿ ಸಮೃದ್ಧವಾಗಿರುವ ಕಡಲೆಕಾಯಿ ಮೂಳೆಗಳನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ.

**ಹೃದಯದ ಆರೋಗ್ಯಕ್ಕೆ ಒಳ್ಳೆಯದು:** ಕಡಲೆಕಾಯಿ



ಹೃದಯದ ಆರೋಗ್ಯಕ್ಕೆ ಒಳ್ಳೆಯದು. ಶೇಂಗಾ ತಿನ್ನುವುದರಿಂದ ದೇಹದಲ್ಲಿ ಒಳ್ಳೆಯ ಕೊಲೆಸ್ಟ್ರಾಲ್ ಮಟ್ಟ ಹೆಚ್ಚುತ್ತದೆ. ದೀರ್ಘಾವಧಿಯಲ್ಲಿ ಹೃದ್ರೋಗದ ಅಪಾಯವನ್ನು ಕಡಿಮೆ ಮಾಡುತ್ತದೆ.

ಖಿನ್ನತೆಯನ್ನು ಕಡಿಮೆ ಮಾಡುವಲ್ಲಿ; ಇತ್ತೀಚಿನ ದಿನಗಳಲ್ಲಿ ಮಾನಸಿಕ ಸಮಸ್ಯೆಯಿಂದ ಬಳಲುತ್ತಿರುವವರ ಸಂಖ್ಯೆ ಹೆಚ್ಚಿದೆ. ಅಂತಹ ಪರಿಸ್ಥಿತಿಯಲ್ಲಿ ಕಡಲೆಕಾಯಿಯನ್ನು ತಿನ್ನುವುದರಿಂದ ಸಮಸ್ಯೆಗಳನ್ನು ಕಡಿಮೆ ಮಾಡಬಹುದು. ಇದರಲ್ಲಿರುವ ಟ್ರಿಪ್ಟೊಫಾನ್ ಸಿರೊಟೋನಿನ್ ಮಟ್ಟವನ್ನು ಹೆಚ್ಚಿಸುತ್ತದೆ. ಇದು ಖಿನ್ನತೆಯನ್ನು ಎದುರಿಸಲು ಸಹಾಯ ಮಾಡುತ್ತದೆ.

# ನಿದ್ರೆ ಹಾಳು ಮಾಡುವ ಗೊರಕೆ ಸಮಸ್ಯೆಯಿಂದ ಮುಕ್ತಿ ಬೇಕಾ..?

ರಾತ್ರಿ ನಿದ್ರೆ ಸುಖಕರವಾಗಿರಬೇಕು. ಪಕ್ಕದವರು ಗೊರಕೆ ಶುರು ಮಾಡಿದ್ರೆ ನಿದ್ರೆ ನರಕವಾಗುತ್ತದೆ. ಈ ಗೊರಕೆ ಒಂದು ಸಾಮಾನ್ಯ ಸಮಸ್ಯೆ ನಿಜ. ಆದ್ರೆ ಕೆಲವೊಮ್ಮೆ ಈ ಸಮಸ್ಯೆ ದೊಡ್ಡದಾಗಬಹುದು. ಇದು ಕೆಲ ದಾಂಪತ್ಯ ಬಿರುಕಿಗೆ ಕಾರಣವಾಗಿದೆ. ಈ ಗೊರಕೆಯಿಂದ ಮುಕ್ತಿ ಬೇಕು ಎನ್ನುವವರು ಸುಲಭ ಮನೆ ಮದ್ದು ಮಾಡಿ ಗೊರಕೆಗೆ ಗುಡ್ ಬೈ ಹೇಳಬಹುದು.

ಮಲಗುವ ಮುನ್ನ ಉಗುರು ಬೆಚ್ಚಗಿನ ನೀರಿಗೆ ಏಲಕ್ಕಿ ಅಥವಾ ಏಲಕ್ಕಿ ಪುಡಿಯನ್ನು ಹಾಕಿ ಕುಡಿಯುತ್ತಿದ್ದರೆ ಗೊರಕೆಯ ಸಮಸ್ಯೆ ಕಡಿಮೆಯಾಗುತ್ತದೆ.

ಮಲಗುವ ಮೊದಲು ಒಂದು ಕಪ್ ಉಗುರು ಬೆಚ್ಚಗಿನ ನೀರಿಗೆ 1 ಚಮಚ ಅರಿಶಿನ ಪುಡಿ ಮತ್ತು ಒಂದು ಟೀ ಚಮಚ ಜೇನುತುಪ್ಪವನ್ನು ಬೆರೆಸಿ ಕುಡಿದರೆ ಗೊರಕೆ ಸಮಸ್ಯೆ ನಿವಾರಣೆಯಾಗುತ್ತದೆ.

ಅರಿಶಿನವನ್ನು ಅನೇಕ ರೋಗಗಳಿಗೆ ರಾಮಬಾಣವೆಂದು ಪರಿಗಣಿಸಲಾಗುತ್ತದೆ. ಮಲಗುವ ಸಮಯಕ್ಕೆ ಅರ್ಧ ಗಂಟೆ ಮೊದಲು ಅರಿಶಿನ ಹಾಲನ್ನು



ಕುಡಿದು ಮಲಗಿದರೆ ಗೊರಕೆ ಸಮಸ್ಯೆ ಬಹಳಷ್ಟು ಕಡಿಮೆಯಾಗುತ್ತದೆ. ಅರಿಶಿನ ಗೊರಕೆ ಸಮಸ್ಯೆಗೆ ಪ್ರಯೋಜನಕಾರಿ ಎಂದು ಸಾಬೀತಾಗಿದೆ.

ಪ್ರತಿದಿನ ಕೆಲವು ಹನಿ ಪುದೀನ ಎಣ್ಣೆಯನ್ನು ನೀರಿಗೆ ಹಾಕಿ ಮಲಗುವ ಮುನ್ನ ಗಾರ್ಗ್ಲಿಂಗ್ ಮಾಡಿದರೆ ಉಸಿರಾಟ ಸಮಸ್ಯೆ ದೂರವಾಗಿ ಗೊರಕೆ ಕಡಿಮೆಯಾಗುತ್ತದೆ.

# ಜಾಯಿಕಾಯಿಯ ಅದ್ಭುತ ಆರೋಗ್ಯ ಪ್ರಯೋಜನಗಳಿವು

ಇಂಡೋನೇಷಿಯಾದ ಮಳೆಕಾಡಿನಲ್ಲಿ ನೆಲೆಗೊಂಡಿರುವ ಮಸಾಲೆ ದ್ವೀಪಗಳಿಗೆ ಸ್ಥಳೀಯವಾಗಿರುವ ಈ ಮರವು ಒಂದಲ್ಲ ಎರಡು ಪ್ರಮುಖ ಮಸಾಲೆಗಳನ್ನು ಹೊಂದಿರುವ ಕೀರ್ತಿಗೆ ಪಾತ್ರವಾಗಿದೆ.

ಪ್ರಧಾನವಾಗಿ ಇದು ಕೆರಿಬಿಯನ್ ಮತ್ತು ಏಷ್ಯಾದಲ್ಲಿ ಬೆಳೆಯುವ ಉಷ್ಣವಲಯದ ಸಸ್ಯವಾಗಿದ್ದರೂ, ಜಾಯಿಕಾಯಿಯ ಮೆಚ್ಚುಗೆಯು ದೂರದವರೆಗೆ ಪ್ರಯಾಣಿಸಿದೆ.

ಖಿನ್ನತೆ ಮತ್ತು ಆತಂಕದ ವಿರುದ್ಧ ಹೋರಾಡುತ್ತದೆ ನೀವು ಆತಂಕ ಅಥವಾ ಖಿನ್ನತೆಯಿಂದ ಬಳಲುತ್ತಿದ್ದರೆ, ಜಾಯಿಕಾಯಿ ಉತ್ತಮ ನೈಸರ್ಗಿಕ ಚಿಕಿತ್ಸೆಯಾಗಿದೆ. ಜಾಯಿಕಾಯಿಯಲ್ಲಿರುವ ಮಿರಿಸ್ಟಿಸಿನ್ ಮತ್ತು ಎಲಿಮಿಸಿನ್‌ನ ಬಾಷ್ಪಶೀಲ ತೈಲ ಸಂಯುಕ್ತಗಳು ಮೆದುಳಿನಲ್ಲಿ ನರಪ್ರೇಕ್ಷಕಗಳಾದ ಸಿರೊಟೋನಿನ್ ಮತ್ತು ಡೋಪಮೈನ್‌ಗಳನ್ನು ಸಕ್ರಿಯಗೊಳಿಸುವ ಮೂಲಕ



ಸೌಮ್ಯವಾದ ನಿದ್ರಾಜನಕ ಮತ್ತು ಆತಂಕ-ವಿರೋಧಿ ಪ್ರಯೋಜನಗಳನ್ನು ನೀಡುತ್ತವೆ.

ಮೆದುಳಿನ ಶಕ್ತಿಯನ್ನು ಹೆಚ್ಚಿಸುತ್ತದೆ ನಿಮ್ಮ ಅರಿವಿನ ಕಾರ್ಯವನ್ನು ಅತ್ಯುತ್ತಮವಾಗಿಡಲು ಜಾಯಿಕಾಯಿ ಮೆದುಳು-ಉತ್ತೇಜಿಸುವ ಟಾನಿಕ್‌ನಂತೆ ಕೆಲಸ ಮಾಡುತ್ತದೆ. ಪುರಾತನ ರೋಮನ್ ಮತ್ತು ಗ್ರೀಕ್ ನಾಗರೀಕತೆಗಳು ಜಾಯಿಕಾಯಿ ಅದರ ನ್ಯೂರೋಪ್ರೊಟೆಕ್ಟಿವ್ ಗುಣಲಕ್ಷಣಗಳಿಗಾಗಿ ಹೆಚ್ಚು ಅವಲಂಬಿಸಿದ್ದರು.

ನಿದ್ರಾಹೀನತೆಯ ವಿರುದ್ಧ ಹೋರಾಡುತ್ತದೆ ನಿದ್ರೆಯ ಕೊರತೆ, ನಿದ್ರಾಹೀನತೆಯಿಂದ ಬಳಲುತ್ತಿರುವ ಜನರಿಗೆ, ಜಾಯಿಕಾಯಿ ನೈಸರ್ಗಿಕ ನಿದ್ರೆಯ ಸಹಾಯಕವಾಗಿ ಕೆಲಸ ಮಾಡುತ್ತದೆ. ಅದರ ಮೆಗ್ನೀಸಿಯಮ್-ಸಮೃದ್ಧ ಸಂಯೋಜನೆಯ ಕಾರಣದಿಂದಾಗಿ, ಜಾಯಿಕಾಯಿ ನರಗಳ ಒತ್ತಡವನ್ನು ನಿವಾರಿಸಲು ಸಹಾಯ ಮಾಡುತ್ತದೆ.

ಕೀಲು ಮತ್ತು ಸ್ನಾಯು ನೋವನ್ನು ನಿವಾರಿಸುತ್ತದೆ ಜಾಯಿಕಾಯಿಯ ಉರಿಯೂತದ ಮತ್ತು ನೋವು ನಿವಾರಕ ಗುಣಲಕ್ಷಣಗಳನ್ನು ಹೊಂದಿದೆ. ಹೀಗಾಗಿ, ಈ ಮಸಾಲೆ ಮತ್ತು ಅದರಿಂದ ಪಡೆದ ತೈಲವು ಕೀಲು ಮತ್ತು ಸ್ನಾಯು ನೋವಿನಂತಹ ಉರಿಯೂತದ ಸಮಸ್ಸಯೆಗಳಿಂದ ಬಳಲುತ್ತಿರುವ ಜನರಿಗೆ ಪರಿಣಾಮಕಾರಿ ದೀರ್ಘಕಾಲದ ನೋವು ನಿವಾರಕವಾಗಿದೆ.

ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ ಜಾಯಿಕಾಯಿ ಒಂದು ಕಾರ್ಮಿನೇಟಿವ್ ಆಗಿದ್ದು ಅದು ಜೀರ್ಣಾಂಗ ವ್ಯವಸ್ಥೆಗೆ ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಒಳ್ಳೆಯದು. ಸಾಮಾನ್ಯ ವಾಕರಿಕೆ, ವಾಂತಿ, ಅಜೀರ್ಣ, ಉಬ್ಬುವುದು, ಮತ್ತು ಅತಿಸಾರವನ್ನು ಸರಾಗಗೊಳಿಸುವ ಜೊತೆಗೆ, ಇದು ಕ್ರೋನ್ಸ್ ಕಾಯಿಲೆಯ ಲಕ್ಷಣಗಳನ್ನು ನಿರ್ವಹಿಸುವಲ್ಲಿ ಸಹಾಯ ಮಾಡುತ್ತದೆ.

(ಹಕ್ಕುತ್ಯಾಗ- ಈ ಲೇಖನದಲ್ಲಿ ನೀಡಲಾಗಿರುವ ಮಾಹಿತಿ ಸಾಮಾನ್ಯ ಜ್ಞಾನ ಹಾಗೂ ಮನೆಮದ್ದು ಮಾಹಿತಿಯನ್ನು ಆಧರಿಸಿದೆ. ಅನುಸರಿಸುವ ಮುನ್ನ ವಿಷಯ ತಜ್ಞರ ಸಲಹೆ ಪಡೆದುಕೊಳ್ಳಲು ಮರೆಯಬೇಡಿ)

# ಸ್ನಾಯು ನೋವು ನಿವಾರಣೆಗೆ ಪ್ರತಿದಿನ ಸೇವಿಸಿ ಈ ಹಣ್ಣು

ಸಾಮಾನ್ಯವಾಗಿ ಎಲ್ಲರಲ್ಲೂ ಸ್ನಾಯು ನೋವು ಕಂಡುಬರುತ್ತದೆ. ಒತ್ತಡ, ಅತಿಯಾದ ಬಳಲಿಕೆ ಮತ್ತು ಸಣ್ಣಪುಟ್ಟ ಗಾಯಗಳಿಂದ ಇದು ಉಂಟಾಗುತ್ತದೆ. ಈ ನೋವನ್ನು ನಿವಾರಿಸಲು ಈ ಸರಳವಾದ ಮನೆಮದ್ದನ್ನು ಬಳಸಿ. ಬಾಳೆಹಣ್ಣು ಆರೋಗ್ಯಕ್ಕೆ ಉತ್ತಮ ಎಂಬುದು ಎಲ್ಲರಿಗೂ ತಿಳಿದೆ ಇದೆ.



ಈ ಬಾಳೆಹಣ್ಣಿನಿಂದ ಸ್ನಾಯು ನೋವನ್ನು ಕೂಡ ನಿವಾರಿಸಬಹುದು. ದೇಹದಲ್ಲಿ ಕಡಿಮೆ ಮಟ್ಟದ ಪೊಟ್ಯಾಶಿಯಂನಿಂದಾಗಿ ಸ್ನಾಯುಗಳ ನೋವು, ಆಯಾಸ, ಸೆಳೆತಕ್ಕೆ ಕಾರಣವಾಗುತ್ತದೆ.

ಬಾಳೆಹಣ್ಣಿನಲ್ಲಿ ಇದರಲ್ಲಿರುವ ಪೊಟ್ಯಾಶಿಯಂ ಸ್ನಾಯುಗಳನ್ನು ಸರಿಯಾಗಿ ಸಂಕುಚಿತಗೊಳಿಸಲು ಸಹಾಯ ಮಾಡುತ್ತದೆ. ಹಾಗಾಗಿ ಪ್ರತಿದಿನ ಮಾಗಿದ ಬಾಳೆಹಣ್ಣು ತಿಂದರೆ ನೋಯುತ್ತಿರುವ ಸ್ನಾಯುಗಳು ನಿವಾರಣೆಯಾಗುತ್ತದೆ.

# ಮನೆಯಂಗಳದಲ್ಲಿ ಬಾಳೆ ಮರ ಬೆಳೆಸುವುದರಿಂದ ಲಾಭವೇನು..?

ಸಾಮಾನ್ಯವಾಗಿ ಹಳ್ಳಿಗಳ ಕಡೆ ಮನೆ ಹತ್ತಿರ ಬಾಳೆಮರವನ್ನು ಬೆಳೆಸುತ್ತಾರೆ. ಈ ಬಾಳೆ ಮರದ ಹೂವು, ಕಾಂಡ, ಕಾಯಿ, ಹಣ್ಣು ಮತ್ತು ಎಲೆಗಳು ಕೂಡ ಆರೋಗ್ಯಕರವಾಗಿದ್ದು, ಇವುಗಳನ್ನು ಬಳಸಿ ಹಲವು ಸಮಸ್ಯೆಗಳನ್ನು ನಿವಾರಿಸಿಕೊಳ್ಳಬಹುದು.

* **ಬಾಳೆ ಹಣ್ಣು:** ಇದು ಉತ್ತಮವಾದ ಫೈಬರ್ ಅಂಶವನ್ನು ಹೊಂದಿರುತ್ತದೆ. ಇದು ಉತ್ತಮ ಜೀರ್ಣಕಾರಿಯಾಗಿದೆ. ಇದು ಕರುಳಿನ ಚಲನೆಗೆ ಸಹಾಯ ಮಾಡುತ್ತದೆ.

* **ಬಾಳೆಹೂವು:** ಇದು



ಡಯಾಬಿಟಿಸ್ ಅನ್ನು ನಿಯಂತ್ರಿಸುತ್ತದೆ. ಇದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಸಮತೋಲಗೊಳಿಸುತ್ತದೆ. ಇದು ಚಯಾಪಚಯ ಕ್ರಿಯೆಯನ್ನು ಹೆಚ್ಚಿಸುತ್ತದೆ.

* **ಬಾಳೆಮರದ ಕಾಂಡ:** ಇದು ದೇಹದಲ್ಲಿ ಸಂಗ್ರಹವಾದ ಸಕ್ಕರೆ ಮತ್ತು ಕೊಬ್ಬನ್ನು ಹೊರಹಾಕುತ್ತದೆ. ಇದು ದೇಹದಲ್ಲಿರುವ ವಿಷವನ್ನು ಹೊರಹಾಕುತ್ತದೆ. ಹಾಗೇ ಮೂತ್ರಪಿಂಡದಲ್ಲಿ ಕಲ್ಲುಗಳು ಬೆಳೆಯುವುದನ್ನು ತಡೆಯುತ್ತದೆ.

* **ಬಾಳೆಕಾಯಿ:** ಇದರಲ್ಲಿ ಫೈಬರ್ ಸಮೃದ್ಧವಾಗಿದ್ದು, ಕರುಳನ್ನು ಬಲಪಡಿಸುತ್ತದೆ. ಹೃದಯದ ಆರೋಗ್ಯವನ್ನು ಕಾಪಾಡುತ್ತದೆ.

* **ಬಾಳೆ ಎಲೆ:** ಇದರಲ್ಲಿ ಊಟ ಮಾಡುವುದರಿಂದ ಹೊಟ್ಟೆಯ ಇನ್ ಫೆಕ್ಷನ್ ಸಮಸ್ಯೆ ಕಾಡುವುದಿಲ್ಲ. ಇದು ಬ್ಯಾಕ್ಟೀರಿಯಾಗಳನ್ನು ನಾಶಪಡಿಸುತ್ತದೆ. ಇದರಲ್ಲಿರುವ ಅಂಶ ಜೀರ್ಣಕ್ರಿಯೆಗೆ ಸಹಕಾರಿಯಾಗಿದೆ.

# ಕಣ್ಣಿನ ದೃಷ್ಟಿ ಸಾಮರ್ಥ್ಯ ಹೆಚ್ಚಿಸಲು ಸುಲಭ ಮತ್ತು ಪರಿಣಾಮಕಾರಿ ಮಾರ್ಗಗಳು

ದೈನಂದಿನ ಚಟುವಟಿಕೆಗಳಿಗೆ ಉತ್ತಮ ದೃಷ್ಟಿ ಅತ್ಯಗತ್ಯ, ಆದರೂ ಅನೇಕ ಜನರು ಆರೋಗ್ಯಕರ ದೃಷ್ಟಿಯನ್ನು ಕಾಪಾಡಿಕೊಳ್ಳಲು ಕಷ್ಟಪಡುತ್ತಾರೆ. ದೃಷ್ಟಿ ದೋಷ ಸರಿಪಡಿಸುವ ಮಸೂರಗಳು ಮತ್ತು ಶಸ್ತ್ರಚಿಕಿತ್ಸೆಗಳು ಲಭ್ಯವಿರುವ ಆಯ್ಕೆಗಳಿದ್ದರೂ, ಉತ್ತಮ ಆಯ್ಕೆ ಎಂದರೆ ಅದು ನೈಸರ್ಗಿಕ ಪ್ರಕ್ರಿಯೆಗಳು ಮಾತ್ರವೇ..

ನಿಮ್ಮ ಕಣ್ಣಿನ ಆರೋಗ್ಯ ಹೆಚ್ಚಿಸುವ ಕೆಲ ಆರೋಗ್ಯಕರ ಸಲಹೆಗಳು ಇಂತಿವೆ. ದೈನಂದಿನ ಚಟುವಟಿಕೆಗಳಿಗೆ ಉತ್ತಮ ದೃಷ್ಟಿ ಅತ್ಯಗತ್ಯ, ಆದರೂ ಅನೇಕ ಜನರು ಆರೋಗ್ಯಕರ ದೃಷ್ಟಿಯನ್ನು ಕಾಪಾಡಿಕೊಳ್ಳಲು ಕಷ್ಟಪಡುತ್ತಾರೆ. ದೃಷ್ಟಿ ದೋಷ ಸರಿಪಡಿಸುವ ಮಸೂರಗಳು ಮತ್ತು ಶಸ್ತ್ರಚಿಕಿತ್ಸೆಗಳು ಲಭ್ಯವಿರುವ ಆಯ್ಕೆಗಳಿದ್ದರೂ, ಉತ್ತಮ ಆಯ್ಕೆ ಎಂದರೆ ಅದು ನೈಸರ್ಗಿಕ ಪ್ರಕ್ರಿಯೆಗಳು ಮಾತ್ರವೇ..

ನಿಮ್ಮ ಕಣ್ಣಿನ ಆರೋಗ್ಯ ಹೆಚ್ಚಿಸುವ ಕೆಲ ಆರೋಗ್ಯಕರ ಸಲಹೆಗಳು ಇಂತಿವೆ. ಆರೋಗ್ಯಕರ ಆಹಾರ ದೃಷ್ಟಿ ಸುಧಾರಣೆಗಾಗಿ ವ್ಯಾಪಕ ಪೋಷಕಾಂಶ-ಭರಿತ ಆಹಾರಗಳನ್ನು ತಿನ್ನುವುದು ಅತ್ಯುತ್ತಮ. ಉತ್ತಮ ಆಹಾರ ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ವಿಟಮಿನ್ ಎ, ಸಿ, ಮತ್ತು ಇ, ಸತು ಮತ್ತು ಸೆಲೆನಿಯಮ್ನಂತಹ ಅಗತ್ಯ ಪೋಷಕಾಂಶಗಳು, ಕ್ಯಾರೊಟಿನಾಯ್ಡ್ಗಳಾದ ಲುಟೀನ್ ಮತ್ತು ಜಿಯಾಕ್ಸಾಂಥಿನ್ ಜೊತೆಗೆ ವಯಸ್ಸಿಗೆ ಸಂಬಂಧಿಸಿದ ಕಣ್ಣಿನ ಅಸ್ವಸ್ಥತೆಗಳಿಂದ ರಕ್ಷಿಸುತ್ತದೆ.

ಮುಖ್ಯವಾಗಿ ಸೊಪ್ಪು, ಬೀಜಗಳು, ಸಮುದ್ರಾಹಾರ ಅಂದರೆ ಮೀನು, ಏಡಿ ಮತ್ತು ಹಣ್ಣು ಮತ್ತು ತರಕಾರಿಗಳನ್ನು ತಿನ್ನುವ ಮೂಲಕ ನೀವು ಮೇಲೆ ತಿಳಿಸಿದ ಎಲ್ಲಾ ಪೋಷಕಾಂಶಗಳನ್ನು ಪಡೆಯಬಹುದು. ಧೂಮಪಾನ ತ್ಯಜಿಸಿ ಧೂಮಪಾನವು ಕಣ್ಣಿನ ಆರೋಗ್ಯದ ಮೇಲೆ ಬಹಳ ಋಣಾತ್ಮಕ ಪರಿಣಾಮವನ್ನು ಬೀರುತ್ತದೆ ಮತ್ತು ವಯಸ್ಸಿಗೆ ಸಂಬಂಧಿಸಿದ ಸಮಸ್ಯೆಗಳಾದ ಮ್ಯಾಕ್ಯುಲರ್ ಡಿಜೆನರೇಶನ್, ಕಣ್ಣಿನ ಪೊರೆ, ಗ್ಲುಕೋಮಾ, ಡಯಾಬಿಟಿಕ್ ರೆಟಿನೋಪತಿ ಮತ್ತು ಡ್ರೈ ಐ ಸಿಂಡ್ರೋಮ್ಗಳ ಅಪಾಯವನ್ನು ಹೆಚ್ಚಿಸುತ್ತದೆ.

ಸಿಗರೇಟ್ ಹೊಗೆಯಲ್ಲಿರುವ ವಿಷಕಾರಿ ವಸ್ತುಗಳು ಉರಿಯೂತವನ್ನು ಉಂಟುಮಾಡಬಹುದು ಮತ್ತು ಕಣ್ಣುಗಳಿಗೆ ರಕ್ತದ ಹರಿವನ್ನು ನಿರ್ಬಂಧಿಸಬಹುದು. ಧೂಮಪಾನದ ದೀರ್ಘಕಾಲೀನ ಪರಿಣಾಮಗಳು ಕಣ್ಣಿನ ಪೊರೆಗಳು ಮತ್ತು ವಯಸ್ಸಿಗೆ ಸಂಬಂಧಿಸಿದ ಮ್ಯಾಕ್ಯುಲರ್ ಡಿಜೆನರೇಶನ್ ಅನ್ನು ಒಳಗೊಂಡಿರುತ್ತವೆ.

ಡಿಜಿಟಲ್ ಸ್ಕ್ರೀನ್ ನೋಡುವ ಸಮಯ ಕಡಿಮೆ ಮಾಡಿ ದೀರ್ಘಾವಧಿಯ ಪರದೆ ನೋಡುವ ಸಮಯ ಅಂ-ದರೆ ಮೊಬೈಲ್, ಲ್ಯಾಪ್ ಟಾಪ್, ಕಂಪ್ಯೂಟರ್ ಡಿಜಿಟಲ್ ಸ್ಕ್ರೀನ್ ನೋಡುವಿಕೆಯು ಕಣ್ಣಿನ ರೆಟಿನಾ ಮತ್ತು ನಿದ್ರೆಯ ಚಕ್ರದ ಮೇಲೆ ಹಾನಿ ಮಾಡುತ್ತದೆ. ಅಲ್ಲದೆ ನೀಲಿ ಬೆಳಕಿನ ಹಾನಿಯಿಂದಾಗಿ ಶುಷ್ಕತೆ, ಆಯಾಸ ಮತ್ತು ಆಯಾಸದಂತಹ ಕಣ್ಣಿನ ಸಮಸ್ಯೆಗಳನ್ನು ಉಂಟುಮಾಡಬಹುದು.

ನಿಮ್ಮ ಪರದೆಯ ಸಮಯವನ್ನು ಮಿತಿಗೊಳಿಸಿ ಮತ್ತು ಕಣ್ಣಿನ ಆಯಾಸವನ್ನು ಕಡಿಮೆ ಮಾಡಲು ಆಗಾಗ್ಗೆ



ವಿರಾಮಗಳನ್ನು ತೆಗೆದುಕೊಳ್ಳಿ. ಅನುವಂಶಿಕ ಸ್ಥಿತಿಗಳ ಬಗ್ಗೆ ತಿಳಿಯಿರಿ ಕೆಲವು ಕಣ್ಣಿನ ಕಾಯಿಲೆಗಳು ಆನುವಂಶಿಕವಾಗಿರುತ್ತವೆ, ಅಂದರೆ ಒಬ್ಬರ ಪೋಷಕರು ತಮಗೆ ಅನುವಂಶಿಕ ಕಣ್ಣಿನ ಸಮಸ್ಯೆ ಇದ್ದರೆ ಅದನ್ನು ತಮ್ಮ ಮಕ್ಕಳಿಗೆ ಅವುಗಳನ್ನು ರವಾನಿಸಬಹುದು.

ಹೀಗಾಗಿ ನಿಮ್ಮ ಕುಟುಂಬದ ವೈದ್ಯಕೀಯ ಇತಿಹಾಸವನ್ನು ತಿಳಿದುಕೊಳ್ಳುವುದು ಕಣ್ಣಿನ ಅಸ್ವಸ್ಥತೆಗಳನ್ನು ಮೊದಲೇ ಪತ್ತೆಹಚ್ಚಲು ಮತ್ತು ಚಿಕಿತ್ಸೆ ನೀಡಲು ಸಹಾಯ ಮಾಡುತ್ತದೆ. ಕಣ್ಣಿನ ಕಾಯಿಲೆಗಳ ಯಾವುದೇ ಕುಟುಂಬದ ಇತಿಹಾಸವಿದ್ದರೆ, ಉತ್ತಮ ಸ್ಕ್ರೀನಿಂಗ್ ಮತ್ತು ತಡೆಗಟ್ಟುವ ಕ್ರಮಗಳನ್ನು ನಿರ್ಧರಿಸಲು ಕಣ್ಣಿನ ತಜ್ಞರೊಂದಿಗೆ ಚರ್ಚಿಸುವುದು ಅತ್ಯಗತ್ಯ. ಹೆಚ್ಚು ನೀರು ಕುಡಿಯಿರಿ ನಿರ್ಜಲೀಕರಣವು ಒಣ ಕಣ್ಣುಗಳು, ಕಿರಿಕಿರಿ ಮತ್ತು ದೇಹದಲ್ಲಿ ಬಳಲಿಕೆಗೆ ಕಾರಣವಾಗಬಹುದು. ಕಣ್ಣುಗಳನ್ನು ನಿರ್ಜಲೀಕರಣದಿಂದ ತಪ್ಪಿಸಲು ದಿನವಿಡೀ ಸಾಕಷ್ಟು ನೀರು ಮತ್ತು ಇತರ ದ್ರವಾಹಾರಗಳನ್ನು ಸೇವಿಸಬೇಕು.

ಕುಡಿಯುವ ನೀರಿನ ಜೊತೆಗೆ, ಸೌತೆಕಾಯಿ, ಕಲ್ಲಂಗಡಿಗಳಂತಹ ಆಹಾರ ಪದಾರ್ಥಗಳು ನಿಮ್ಮ ಕಣ್ಣುಗಳನ್ನು ನಿರ್ಜಲೀಕರಣ ಸಮಸ್ಯೆಯನ್ನು ದೂರ ಮಾಡುತ್ತವೆ. ರಕ್ಷಣಾತ್ಮಕ ಕನ್ನಡಕ ಧರಿಸಿ ರಕ್ಷಣಾತ್ಮಕ ಕನ್ನಡಕಗಳನ್ನು ಬಳಸುವುದು ಕಣ್ಣಿನ ಗಾಯವನ್ನು ತಪ್ಪಿಸಲು ನಿಮಗೆ ಸಹಾಯ ಮಾಡುತ್ತದೆ. ಕ್ರೀಡೆಗಳು ಅಥವಾ ಅಪಾಯಕಾರಿ ಕೆಲಸದ ಸಂದರ್ಭಗಳಂತಹ ಅಪಾಯಕಾರಿ ಚಟುವಟಿಕೆಗಳಲ್ಲಿ ಕನ್ನಡಕಗಳನ್ನು ಬಳಸುವುದು ಕಣ್ಣಿನ ಹಾನಿಯನ್ನು ತಪ್ಪಿಸಲು ಸಹಾಯ ಮಾಡುತ್ತದೆ. ಪ್ರಮುಖವಾಗಿ ಹೊರಾಂಗಣದಲ್ಲಿ, ಗಗಿ ರಕ್ಷಣೆಯೊಂದಿಗೆ ಸನ್ ಗ್ಲಾಸ್ ಗಳು ಹಾನಿಕಾರಕ ಗಗಿ ಕಿರಣಗಳಿಂದ ಕಣ್ಣುಗಳನ್ನು ರಕ್ಷಿಸಲು ಸಹಾಯ ಮಾಡುತ್ತದೆ.

ನಿಯಮಿತ ಕಣ್ಣಿನ ತಪಾಸಣೆ ಸಂಪೂರ್ಣ ಕಣ್ಣಿನ ಪರೀಕ್ಷೆಯು ಯಾವುದೇ ರೋಗನಿರ್ಣಯ ಮಾಡದ ಕಣ್ಣಿನ ಸ್ಥಿತಿಯನ್ನು ಮೊದಲೇ ಪತ್ತೆ ಮಾಡುತ್ತದೆ, ನಿಯಮಿತ ಕಣ್ಣಿನ ಪರೀಕ್ಷೆಗಳು ನಿಮಗೆ ಕನ್ನಡಕ ಅಥವಾ ಕಾಂಟ್ಯಾಕ್ಟ್ ಲೆನ್ಸ್‌ಗಳಿಗೆ ಹೊಸ ಪ್ರಿಸ್ಕ್ರಿಪ್ಷನ್ ಅಗತ್ಯವಿದೆಯೇ ಎಂದು ನಿರ್ಧರಿಸಲು ಸಹಾಯ ಮಾಡುತ್ತದೆ, ನಿಮಗೆ ಸಾಧ್ಯವಾದಷ್ಟು ಆಗಾಗ್ಗೆ ಕಣ್ಣಿನ ಪರೀಕ್ಷೆ ಮಾಡಿಸಿಕೊಳ್ಳುವ ಮೂಲಕ ಉತ್ತಮ ದೃಷ್ಟಿ ಇದೆ ಎಂದು ಖಚಿತಪಡಿಸುತ್ತದೆ.

ಕಣ್ಣಿನ ನೈರ್ಮಲ್ಯ ಅಭ್ಯಾಸ ನಿಮ್ಮ ಕಣ್ಣುಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಕಣ್ಣಿನ ಸೋಂಕನ್ನು ತಡೆಗಟ್ಟಲು ಸಹಾಯ ಮಾಡುತ್ತದೆ. ಕಣ್ಣಿನ ಸಂಬಂಧಿತ ಸಮಸ್ಯೆಗಳನ್ನು ಅಭಿವೃದ್ಧಿಪಡಿಸುವ ಅಪಾಯವನ್ನು ಕಡಿಮೆ ಮಾಡುತ್ತದೆ. ನಿಮ್ಮ ಕೈಗಳನ್ನು ಆಗಾಗ್ಗೆ ತೊಳೆಯುವ ಮೂಲಕ ಮತ್ತು ಕಣ್ಣುಗಳನ್ನು ಸ್ಪರ್ಶಿಸುವುದನ್ನು ತಪ್ಪಿಸುವ ಮೂಲಕ ಅಪಾಯಕಾರಿ ಬ್ಯಾಕ್ಟೀರಿಯಾದ ಹರಡುವಿಕೆಯನ್ನು ನೀವು ನಿಲ್ಲಿಸಬಹುದು.

ಅಲ್ಲದೆ, ಕಾಂಟ್ಯಾಕ್ಟ್ ಲೆನ್ಸ್‌ಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಮತ್ತು ಅವುಗಳನ್ನು ಕ್ಲೀನ್ ಕೇಸ್ನಲ್ಲಿ ಸಂಗ್ರಹಿಸುವುದು ಕಿರಿಕಿರಿ ಮತ್ತು ಸೋಂಕುಗಳನ್ನು ತಪ್ಪಿಸಲು ಸಹಾಯ ಮಾಡುತ್ತದೆ. ಸಾಕಷ್ಟು ನಿದ್ರೆ ಮಾಡಿ ಕಣ್ಣಿನ ಆರೋಗ್ಯಕ್ಕೆ ಸಾಕಷ್ಟು ನಿದ್ರೆ ಮುಖ್ಯವಾಗಿದೆ. ಏಕೆಂದರೆ ಇದು ಕಣ್ಣುಗಳಿಗೆ ವಿಶ್ರಾಂತಿ ಮತ್ತು ದೇಹದ ಪುನರ್ಯೌವನಗೊಳಿಸುವಿಕೆಗೆ ಇದು ಅನುವು ಮಾಡಿಕೊಡುತ್ತದೆ. ನಿದ್ರಾಹೀನತೆಯು ಕಣ್ಣಿನ ಆಯಾಸ, ದಣಿವು ಮತ್ತು ಒಣ ಕಣ್ಣುಗಳಿಗೆ ಕಾರಣವಾಗಬಹುದು.

ಅತ್ಯುತ್ತಮ ಕಣ್ಣಿನ ಆರೋಗ್ಯಕ್ಕಾಗಿ ನೀವು ಪ್ರತಿ ರಾತ್ರಿ 7-8 ಗಂಟೆಗಳ ನಿದ್ದೆ ಮಾಡಬೇಕಾಗುತ್ತದೆ. ಕಣ್ಣುಗಳ ವ್ಯಾಯಾಮ ಕಣ್ಣಿನ ವ್ಯಾಯಾಮಗಳು ಕಣ್ಣಿನ ಸ್ನಾಯುಗಳನ್ನು ಬಲಪಡಿಸುತ್ತದೆ. ಕಣ್ಣಿನ ಆಯಾಸವನ್ನು ನಿರ್ಬಂಧಿಸಿ ಕಣ್ಣಿಗೆ ರಕ್ತ ಸಂಚಾರ ಸರಾಗಗೊಳಿಸುತ್ತದೆ. ದೀರ್ಘಾವಧಿಯಲ್ಲಿ ದೃಷ್ಟಿ ಸುಧಾರಿಸುತ್ತದೆ. ದೂರದ ವಸ್ತುಗಳ ಮೇಲೆ ಕೇಂದ್ರೀಕರಿಸುವುದು ಅಥವಾ ಕಣ್ಣಿನ ಯೋಗ ಮಾಡುವುದು ಕಣ್ಣಿನ ವ್ಯಾಯಾಮಗಳ ಉದಾಹರಣೆಗಳಾಗಿವೆ, ಅದು ಕಣ್ಣಿನ ಸಮನ್ವಯವನ್ನು ಸುಧಾರಿಸಲು, ಆಯಾಸವನ್ನು ಕಡಿಮೆ ಮಾಡಲು ಮತ್ತು ವಿಶ್ರಾಂತಿಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ.

# ಆದಿವಾಸಿಗಳ ಉನ್ನತಿಗಾಗಿ 24 ಸಾವಿರ ಕೋಟಿ ರೂ.ಗಳ ಯೋಜನೆಗೆ ನ.15ರಂದು ಪ್ರಧಾನಿ ಮೋದಿ ಚಾಲನೆ

ನವದೆಹಲಿ: ಆದಿವಾಸಿಗಳ ಉನ್ನತಿಗಾಗಿ 24,000 ಕೋಟಿ ರೂ.ಗಳ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಅವರು ನವೆಂಬರ್ 15ರಂದು ಚಾಲನೆ ನೀಡಲಿದ್ದಾರೆ.

ಸ್ವಾತಂತ್ರ್ಯ ನಂತರ ದೇಶದಲ್ಲಿ ಈ ರೀತಿಯ ಮೊದಲ ಯೋಜನೆ ಇದಾಗಿದೆ. ಇದನ್ನು ಕಿಜಿ ಕಗಿಖಿಉ (ನಿರ್ದಿಷ್ಟವಾಗಿ ದುರ್ಬಲ ಬುಡಕಟ್ಟು ಗುಂಪುಗಳು) ಅಭಿವೃದ್ಧಿ ಮಿಷನ್ ಎಂದು ಹೆಸರಿಸಲಾಗಿದೆ. 2023-24ರ ಹಣಕಾಸು ವರ್ಷದ ಬಜೆಟ್‌ನಲ್ಲಿ ಈ ಉದ್ದೇಶವನ್ನು ಘೋಷಿಸಲಾಗಿದೆ. ನಿರ್ದಿಷ್ಟವಾಗಿ ದುರ್ಬಲ ಬುಡಕಟ್ಟು ಗುಂಪುಗಳ (ಕಗಿಖಿಉ) ಸಾಮಾಜಿಕ-ಆರ್ಥಿಕ ಸ್ಥಿತಿಯನ್ನು ಸುಧಾರಿಸುವುದು ಇದರ ಉದ್ದೇಶವಾಗಿದೆ. ದೇಶದ 18 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಇಂತಹ 75 ಬುಡಕಟ್ಟುಗಳಿವೆ. ಅವರು 200 ಜಿಲ್ಲೆಗಳಲ್ಲಿ 22,544 ಹಳ್ಳಿಗಳಲ್ಲಿ ವಾಸಿಸುತ್ತಿದ್ದಾರೆ. 28 ಲಕ್ಷ ಜನಸಂಖ್ಯೆಯನ್ನು ಹೊಂದಿದ್ದಾರೆ.

ಈ ಬುಡಕಟ್ಟುಗಳು ಹೆಚ್ಚಾಗಿ ದಟ್ಟವಾದ ಕಾಡುಗಳಲ್ಲಿ ವಾಸಿಸುತ್ತವೆ. ಅವರನ್ನು ತಲುಪುವುದು ಸುಲಭವಲ್ಲ. ಹೀಗಾಗಿ ಅವರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಈ ಯೋಜನೆ ರೂಪಿಸಲಾಗಿದೆ. ಸರ್ಕಾರದ ಮೂಲಗಳ ಪ್ರಕಾರ, ಮಿಷನ್ ಅಡಿಯಲ್ಲಿ ರಸ್ತೆ ಮತ್ತು ಟೆಲಿಕಾಂ ಸಂಪರ್ಕ, ವಿದ್ಯುತ್, ವಸತಿ, ಶುದ್ಧ ಕುಡಿಯುವ ನೀರು ಮತ್ತು ನೈರ್ಮಲ್ಯ, ಶಿಕ್ಷಣ, ಆರೋಗ್ಯ ಮತ್ತು ಪೌಷ್ಟಿಕಾಂಶ ಸೌಲಭ್ಯಗಳನ್ನು ಈ ಬುಡಕಟ್ಟು ಪ್ರದೇಶಗಳಲ್ಲಿ ಒದಗಿಸಲಾಗುವುದು. ಅಲ್ಲದೆ, ಅವರಿಗೆ ಜೀವನೋಪಾಯದ ಅವಕಾಶಗಳನ್ನು ಒದಗಿಸಲಾಗುವುದು. ಒಂಬತ್ತು ಸಚಿವಾಲಯಗಳ 11 ಯೋಜನೆಗಳ ಮೂಲಕ ಈ ಮಿಷನ್ ಅನ್ನು ಕಾರ್ಯಗತಗೊಳಿಸಲಾಗುತ್ತದೆ. ಯೋಜನೆಯ ಕೆಲವು ಷರತ್ತುಗಳನ್ನು ಸಹ ಸಡಿಲಗೊಳಿಸಲಾಗುವುದು.



**ಬಿರ್ಸಾ ಮುಂಡಾ ಗ್ರಾಮದಲ್ಲಿ ಮೋದಿ ಚಾಲನೆ**

ನವೆಂಬರ್ 15ರಂದು ಹುತಾತ್ಮ ಬಿರ್ಸಾ ಮುಂಡಾ ಅವರ ಜನ್ಮಸ್ಥಳ ಉಲಿಹಾತುದಲ್ಲಿ ಮೋದಿ ಇರಲಿದ್ದಾರೆ. ಮೂಲಗಳ ಪ್ರಕಾರ ಪ್ರಧಾನಿಯವರು ನವೆಂಬರ್ 14 ರ ಸಂಜೆ ರಾಂಚಿಯ ಬಿರ್ಸಾ ಮುಂಡಾ ವಿಮಾನ ನಿಲ್ದಾಣವನ್ನು ತಲುಪಲಿದ್ದಾರೆ. ಇದಾದ ಬಳಿಕ ರಾಂಚಿ ವಿಮಾನ ನಿಲ್ದಾಣದಿಂದ ರಾಜಭವನದವರೆಗೆ ರೋಡ್ ಶೋ ನಡೆಸಲಿದ್ದಾರೆ. ನವೆಂಬರ್ 15 ರಂದು ಬೆಳಿಗ್ಗೆ ಅವರು ಮೊದಲು ರಾಜಧಾನಿಯ ಜೈಲ್ ಚೌಕ್‌ನಲ್ಲಿರುವ 'ಭಗವಾನ್ ಬಿರ್ಸಾ ಮುಂಡಾ ಮೆಮೋರಿಯಲ್ ಗಾರ್ಡನ್ ಕಮ್ ಫ್ರೀಡಂ ಫೈಟರ್ಸ್ ಮ್ಯೂಸಿಯಂ'ಗೆ ಹೋಗುತ್ತಾರೆ. ಇದಾದ ಬಳಿಕ ರಾಂಚಿ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಖುಂಟಿಗೆ ತೆರಳಲಿದ್ದಾರೆ. ಪ್ರಧಾನಿ ಮೋದಿ ಅವರು 'ಉಲಿಹಾತು' ನಲ್ಲಿರುವ ಭಗವಾನ್ ಬಿರ್ಸಾ ಮುಂಡಾ ಅವರ ಜನ್ಮಸ್ಥಳದಲ್ಲಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುತ್ತಾರೆ ಮತ್ತು **PVTG** ಮಿಷನ್ ಗೆ ಚಾಲನೆ ನೀಡುತ್ತಾರೆ.



## ಉಡುಪಿಯಲ್ಲಿ ನಾಲ್ವರ ಹತ್ಯೆ ಪ್ರಕರಣ:

### ಬೆಳಗಾವಿಯಲ್ಲಿ ಆರೋಪಿ ಪ್ರವೀಣ್ ಚೌಗಲೆ ಬಂಧನ

ಉಡುಪಿ: ಇಲ್ಲಿನ ನೇಜಾರಿನಲ್ಲಿ ಒಂದೇ ಕುಟುಂಬದ ನಾಲ್ವರ ಬರ್ಬರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ಹಿಡಿಯುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಮಹಾರಾಷ್ಟ್ರ ಸಾಂಗ್ಲಿ ಮೂಲದ ಪ್ರವೀಣ್ ಅರುಣ್ ಚೌಗಲೆ ಬಂಧಿತ ಆರೋಪಿಯಾಗಿದ್ದು, ಉಡುಪಿಯಲ್ಲಿ ಕೊಲೆ ಮಾಡಿ ಬೆಳಗಾವಿ ಜಿಲ್ಲೆ ರಾಯಬಾಗ ತಾಲೂಕಿನ ಕುಡಚಿಯಲ್ಲಿ ಸಂಬಂಧಿ ಮನೆಯಲ್ಲಿ ಅಡಗಿ ಕುಳಿತಿದ್ದನು. ಆತನ ಮೊಬೈಲ್ ಟವರ್ ಲೊಕೇಶನ್ ಆಧರಿಸಿ ಉಡುಪಿ ಪೊಲೀಸರು ಆತನನ್ನು ಬಂಧಿಸಿದ್ದಾರೆ.

ಪ್ರವೀಣ್ ಅರುಣ್ CIS ಈ ಸಿಬ್ಬಂದಿಯಾಗಿದ್ದು ಮಂಗಳೂರು ವಿಮಾನ ನಿಲ್ದಾಣದಲ್ಲಿ ಸೆಕ್ಯುರಿಟಿಯಾಗಿ ಕೆಲಸ ಮಾಡುತ್ತಿದ್ದರು. ಇನ್ನು ಗಗನಸಖಿಯಾಗಿ ಕೆಲಸ ಮಾಡುತ್ತಿದ್ದ ಅಯ್ನಾಜ್ ಗೆ ಪ್ರವೀಣ್ ಪರಿಚಯವಾಗಿತ್ತು. ಇಬ್ಬರು ಪರಸ್ಪರ ಆತ್ಮೀಯವಾಗಿದ್ದರು.

ಆದರೆ ನಂತರ ಅಯ್ನಾಜ್ ಆತನಿಂದ ದೂರವಾಗಿದ್ದಳು. ಇದರಿಂದ ಕುಪಿತನಾಗಿದ್ದ ಪ್ರವೀಣ್ ಆಕೆಯನ್ನು ಕೊಲೆ ಮಾಡುವ ನಿರ್ಧಾರ ಮಾಡಿದ್ದಾನೆ ಎಂದು ಹೇಳಲಾಗುತ್ತಿದೆ.

ಅಯ್ನಾಜ್ ಳಿಗೆ ಚೂರು ಇರಿಯುತ್ತಿದ್ದಾಗ ಆಕೆಯನ್ನು ರಕ್ಷಿಸಲು ಬಂದ ತಾಯಿ, ಸಹೋದರಿಗೂ ಪ್ರವೀಣ್ ಚೂರಿ ಇರಿದಿದ್ದಾನೆ. ಇನ್ನು ಮನೆಯಲ್ಲಿ ಗಲಾಟೆಯಾಗುತ್ತಿದ್ದುದ್ದನ್ನು ಗಮನಿಸಿದ ಅಸೀಮ್ ಮನೆಗೆ ಓಡಿ ಬಂದಿದ್ದಾನೆ. ಈ ವೇಳೆ ಅಸೀಮ್ ಗೂ ಚೂರಿ ಇರಿದು ಪ್ರವೀಣ್ ಅಲ್ಲಿಂದ ಪರಾರಿಯಾಗಿದ್ದನು.

ಉಡುಪಿಯಲ್ಲಿ ಒಂದೇ ಕುಟುಂಬದ ನಾಲ್ವರ ಬರ್ಬರ ಹತ್ಯೆ ಪ್ರಕರಣ ರಾಜ್ಯಾದ್ಯಂತ ಸಂಚಲನ ಮೂಡಿಸಿತ್ತು. ಇನ್ನು ಆರೋಪಿ ಉಡುಪಿಗೆ ಬಂದಿದ್ದು ಕೆಲ ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ಇನ್ನು ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡ ಉಡುಪಿ ಪೊಲೀಸರು ಕೊನೆಗೂ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ಆಧುನಿಕ ಭಾರತ ನಿರ್ಮಾಣಕ್ಕೆ ಅಡಿಗಲ್ಲು ಹಾಕಿದವರು ನೆಹರೂ: ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು: ಆಧುನಿಕ ಭಾರತ ನಿರ್ಮಾಣಕ್ಕೆ ಅಡಿಗಲ್ಲು ಹಾಕಿದವರು ಜವಾಹರಲಾಲ್ ನೆಹರೂ. ಅವರ ದೂರದೃಷ್ಟಿಯ ಫಲವನ್ನು ಆಗಿನ-ಈಗಿನ ಪೀಳಿಗೆಯವರೂ ಅನುಭವಿಸುತ್ತಿದ್ದಾರೆ. ಮುಂದಿನ ಪೀಳಿಗೆಯವರೂ ಅನುಭವಿಸುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಮಾಜಿ ಪ್ರಧಾನಿ ಜವಾಹರಲಾಲ್ ನೆಹರೂ ಅವರ 134 ನೇ ಜನ್ಮ ದಿನೋತ್ಸವದ ಅಂಗವಾಗಿ ವಿಧಾನಸೌಧದಲ್ಲಿರುವ ಪ್ರತಿಮೆಗೆ ಹೂಮಾಲೆ ಹಾಕಿ ಗೌರವ ಸಲ್ಲಿಸಿದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದರು.

ಪ್ರಜಾಪ್ರಭುತ್ವ-ಸಮಾಜವಾದ-ಜಾತ್ಯತೀತತೆ ನೆಹರೂ ಬದುಕಿನ ಮೌಲ್ಯಗಳು. ಈ ಮೌಲ್ಯಗಳನ್ನು ಪ್ರಧಾನಮಂತ್ರಿಯಾಗಿ ಭಾರತದಲ್ಲಿ ನೆಲೆಯೂರಿಸಲು ಶ್ರಮಿಸಿದರು. ಈ ಮೌಲ್ಯಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವುದೇ ನೆಹರೂ ಅವರಿಗೆ ನಾವು ಸಲ್ಲಿಸುವ ಅರ್ಥಪೂರ್ಣ ಶ್ರದ್ಧಾಂಜಲಿ ಎಂದರು.



ಮಕ್ಕಳ ಬಗ್ಗೆ ಅಪಾರ ಪ್ರೀತಿ ಹೊಂದಿದ್ದ ಕಾರಣಕ್ಕೇ ದೇಶದ ಮಕ್ಕಳ ಪಾಲಿಗೆ ಚಾಚಾ ನೆಹರೂ ಆದರು. ಸ್ವಾತಂತ್ರ್ಯ ಹೋರಾಟದಲ್ಲಿ 9 ವರ್ಷಗಳ ಕಾಲ ಜೈಲುವಾಸ ಅನುಭವಿಸಿದ್ದರು. ಸ್ವಾತಂತ್ರ್ಯಾ ನಂತರದಲ್ಲಿ ದೇಶದ ಪ್ರಧಾನಿಯಾಗಿ ಆಧುನಿಕ ಭಾರತದ ಶಿಲ್ಪಿ ಎನ್ನಿಸಿಕೊಂಡರು ಎಂದು ವಿವರಿಸಿದರು.

ನೆಹರೂ ಅವರು ಪ್ರಧಾನಿ ಆಗಿ ವಿರೋಧ ಪಕ್ಷದವರು ಮಾತಾಡುವಾಗ ಸಹನೆಯಿಂದ ಕೇಳಿಸಿಕೊಳ್ಳುತ್ತಿದ್ದರು.

ವಿರೋಧ ಪಕ್ಷದವರ ಮಾತಿಗೆ ಗೌರವ ಕೊಡುತ್ತಿದ್ದ ಘನತೆಯ ವ್ಯಕ್ತಿತ್ವ ಅವರದ್ದಾಗಿತ್ತು ಎಂದು ಸ್ಮರಿಸಿದರು.

ಯೋಜನಾ ಆಯೋಗ ರಚಿಸಿದರು. ಪಂಚವಾರ್ಷಿಕ ಯೋಜನೆ ಜಾರಿಗೆ ತಜದರು. ಕೊನೆ ಕ್ಷಣದವರೆಗೂ ಪ್ರಜಾಪ್ರಭುತ್ವ, ಜಾತ್ಯತೀತ ತತ್ವ, ಸಮಾಜವಾದದ ಮೌಲ್ಯಗಳನ್ನು ಜನಮಾನಸಕ್ಕೆ ವಿಸ್ತರಿಸಲು ಶ್ರಮಿಸಿದರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹೆಚ್ ಡಿ ಕೆಗೆ ಹೊಟ್ಟೆಕಿಚ್ಚು ಒಂದು ಕೋಟಿಗೂ ಅಧಿಕ ಮಹಿಳೆಯರು ಬಸ್ ಗಳಲ್ಲಿ ಉಚಿತ ಪ್ರಯಾಣ ಮಾಡಿದ್ದಾರೆ. ಇದು ಸಾಧನೆ ಅಲ್ವಾ ? ಈ ಸಾಧನೆಗಳನ್ನು ಹೆಚ್ ಡಿ ಕೆಗೆ ಸಹಿಸಲು ಆಗುತ್ತಿಲ್ಲ. ಈ ಕಾರಣಕ್ಕೇ ಪರದಾಡುತ್ತಿದ್ದಾರೆ ಎಂದು ಇದೇ ವೇಳೆ ಸಿಎಂ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಡಿಸಿಎಂ ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪ್ರಸಿದ್ಧ ಹೊಟೆಲ್ ಉದ್ಯಮಿ ಸುರೇಶ ನಾಯರಿ ನಿಧನ



ಬೆಳಗಾವಿ: ಬೆಳಗಾವಿಯ ಹರ್ಷಾ ಹೊಟೇಲ್, ಶಬರಿ ಹೊಟೇಲ್, ಸಾಯಿ ಶಬರಿ ಹೊಟೆಲ್ ಗಳ ಮಾಲಕರಾಗಿದ್ದ ಸುರೇಶ ಗಣಪಯ್ಯ ನಾಯರಿ(52) ಅನಾರೋಗ್ಯದಿಂದ ಸೋಮವಾರ ರಾತ್ರಿ ನಿಧನ ಹೊಂದಿದ್ದಾರೆ.

ಇಲ್ಲಿಯ ರಾಮತೀರ್ಥನಗರ ನಿವಾಸಿಯಾಗಿದ್ದ ಸುರೇಶ ಮೂಲತಃ ಬೈಂದೂರು ತಾಲೂಕಿನ ಕಿರಿಮಂಜೇಶ್ವರ ಗ್ರಾಮದವರಾಗಿದ್ದರು.

ಅನಾರೋಗ್ಯದಿಂದ ಬಳಲುತ್ತಿದ್ದ ಸುರೇಶ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಿಸದೇ ನಿಧನರಾಗಿದ್ದಾರೆ.

ಪತ್ನಿ, ಇಬ್ಬರು ಪುತ್ರಿಯರು, ಪುತ್ರ ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

ಅಂತ್ಯಕ್ರಿಯೆ ಉಡುಪಿ ಜಿಲ್ಲೆಯ ಬೈಂದೂರು ತಾಲೂಕಿನ ಕಿರಿಮಂಜೇಶ್ವರ ಗ್ರಾಮದಲ್ಲಿ ನ. 14ರಂದು ಸಂಜೆ 4 ಗಂಟೆಗೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸುರೇಶ ನಾಯರಿ ಅವರು 1971ರಲ್ಲಿ ಜನಿಸಿದ್ದು,1987ರಲ್ಲಿ ಅಣ್ಣನೊಂದಿಗೆ ಬೆಳಗಾವಿಯಲ್ಲಿ ಪಾನ್ ಅಂಗಡಿ ಹಾಗೂ ಟೀ ಸ್ಟಾಲಿನಲ್ಲಿ ಕೆಲಸ ಆರಂಭಿಸಿದರು. 1991ರಲ್ಲಿ ಸ್ವಂತ ಉದ್ಯಮವನ್ನು ಪ್ರಾರಂಭಿಸಿದರು.

ಆಟೋ ನಗರದಲ್ಲಿ 2001ರಲ್ಲಿ ಹರ್ಷಾ ಫ್ಯಾಮಿಲಿ ರೆಸ್ಟೋರೆಂಟ್, ರಾಮದೇವ ಹೊಟೇಲ್ ಪಕ್ಕದಲ್ಲಿ 2013ರಲ್ಲಿ ಶಬರಿ ಹೊಟೇಲ್, ಶಿವಬಸವ ನಗರದ ಕೆಪಿಟಿಸಿಎಲ್ ಸಭಾಭವನ ಎದುರು 2019ರಲ್ಲಿ ಶ್ರೀ ಸಾಯಿ ಶಬರಿ ಹೊಟೇಲ್ ಆರಂಭಿಸಿದರು.

ಆಟೋ ನಗರದ ಮೊದಲಿನ ಹರ್ಷಾ ಹೊಟೇಲ್ ಅತ್ಯಾಧುನಿಕ ಸೌಲಭ್ಯವುಳ್ಳ, ಹೊಸ ವಿನ್ಯಾಸದೊಂದಿಗೆ ಮೇ 25ರಂದು ಲೋಕಾರ್ಪಣೆಯಾಗಿದೆ. ಗುರು ವಿವೇಕಾನಂದ ಸೊಸೈಟಿ ನಿರ್ದೇಶಕರಾಗಿಯೂ ಕಾರ್ಯ ನಿರ್ವಹಿಸುತ್ತಿದ್ದರು.

# ಕೇರಳ: ಅಲುವಾ ಅತ್ಯಾಚಾರ, ಕೊಲೆ ಪ್ರಕರಣ: ಅಪರಾಧಿಗೆ ಮರಣದಂಡನೆ

ಅಲುವಾ: ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ಅಪರಾಧಿಯಾಗಿದ್ದ ವ್ಯಕ್ತಿಗೆ ಕೇರಳ ನ್ಯಾಯಾಲಯ ಮಂಗಳವಾರ ಮರಣದಂಡನೆ ವಿಧಿಸಿದೆ.

ಬಿಹಾರದ 5 ವರ್ಷದ ಬಾಲಕಿಯನ್ನು ಅತ್ಯಾಚಾರ ಮಾಡಿ ಕೊಂದ ವಲಸೆ ಕಾರ್ಮಿಕ ಅಶ್ವಕ್ ಆಲಂಗೆ ಪೋಕ್ಸೋ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಕೆ ಸೋಮನ್ ಅವರ ಉಗ್ರ ಶಿಕ್ಷೆಯನ್ನು ಪ್ರಕಟಿಸಿದರು. ದೇಶಾದ್ಯಂತ ಮಕ್ಕಳ ದಿನಾಚರಣೆ ದಿನದಂದೇ ಈ ಶಿಕ್ಷೆಯನ್ನು ಪ್ರಕಟಿಸಲಾಯಿತು.

ಆಲಂಗೆ ಶಿಕ್ಷೆ ವಿಧಿಸಿದಾಗ ಸಂತ್ರಸ್ತೆಯ ಪೋಷಕರು



ನ್ಯಾಯಾಲಯಕ್ಕೆ ಹಾಜರಾಗಿದ್ದರು. ಪ್ರಕರಣ ಅಪರೂಪದ-ಅಪರೂಪದ ವರ್ಗಕ್ಕೆ ಸೇರುತ್ತದೆ ಮತ್ತು ಆದ್ದರಿಂದ ಅಪರಾಧಿಗೆ ಮರಣದಂಡನೆ ವಿಧಿಸಬೇಕು ಎಂದು ಪ್ರಾಸಿಕ್ಯೂಷನ್ ವಾದಿಸಿತ್ತು. ಶಿಕ್ಷೆ ಕುರಿತ ವಾದದ ಸಮಯದಲ್ಲಿ, ಇತರ ಆರೋಪಿಗಳನ್ನು ಬಿಡಲಾಗಿದ್ದು, ನನನ್ನು ಮಾತ್ರ ಪ್ರಕರಣದಲ್ಲಿ ಸಿಲುಕಿಸಿದ್ದಾರೆ ಎಂದು ಆಲಂ ನ್ಯಾಯಾಲಯದಲ್ಲಿ ಹೇಳಿದ್ದರು ಮತ್ತು ಅದನ್ನು ಮೀರಿ ಅವರು ಯಾವುದೇ ಸಲ್ಲಿಕೆಯನ್ನು ಮಾಡಲಿಲ್ಲ ಎಂದು ಪ್ರಾಸಿಕ್ಯೂಷನ್ ಹೇಳಿದೆ.

ಚಾರ್ಜ್ ಶೀಟ್‌ನಲ್ಲಿ ಎಲ್ಲಾ 16 ಅಪರಾಧಗಳಲ್ಲಿ ಆಲಂ ತಪ್ಪಿತಸ್ಥನೆಂದು ನ್ಯಾಯಾಲಯ ತೀಪು ನೀಡಿತ್ತು. 16ರಲ್ಲಿ ಐದು ಅಪರಾಧಗಳಿಗೆ ಮರಣದಂಡನೆ ಶಿಕ್ಷೆಯಾಗುತ್ತದೆ ಎಂದು ಪ್ರಾಸಿಕ್ಯೂಷನ್ ಈ ಹಿಂದೆ ಹೇಳಿತ್ತು.

ಜುಲೈ 28 ರಂದು ಅಪ್ರಾಪ್ತ ಬಾಲಕಿಯನ್ನು ಬಾಡಿಗೆ ಮನೆಯಿಂದ ಅಪಹರಿಸಿದ ನಂತರ ಆಕೆಯ ಮೇಲೆ ಅಮಾನುಷ ಅತ್ಯಾಚಾರ ನಡೆಸಿ ಕತ್ತು ಹಿಸುಕಿ ಹತ್ಯೆ ಮಾಡಲಾಗಿತ್ತು.

ಬಳಿಕ ಆಲುವಾದಲ್ಲಿನ ಸ್ಥಳೀಯ ಮಾರುಕಟ್ಟೆಯ ಹಿಂಭಾಗದ ಪ್ರದೇಶದಲ್ಲಿ ಬಾಲಕಿಯ ಶವವನ್ನು ಬಣವೆಯಲ್ಲಿ ಎಸೆದಿರುವುದು ಪತ್ತೆಯಾಗಿತ್ತು. ಸಿಸಿಟಿವಿ ದೃಶ್ಯಗಳನ್ನು ಆಧರಿಸಿ ಆರೋಪಿಯನ್ನು ಬಂಧಿಸಲಾಗಿದೆ.

## ಆರ್ಥಿಕವಾಗಿ ದಿವಾಳಿಯಾಗಿರುವ ಪಾಕಿಸ್ತಾನದಿಂದ ಉಕ್ರೇನ್ ಗೆ 364 ಮಿಲಿಯನ್ ಡಾಲರ್ ಶಸ್ತ್ರಾಸ್ತ್ರ ಮಾರಾಟ

ಇಸ್ಲಾಮಾಬಾದ್/ ಲಂಡನ್: ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿರುವ ಪಾಕಿಸ್ತಾನ ಕಳೆದ ವರ್ಷ ಉಕ್ರೇನ್ ಗೆ 364 ಮಿಲಿಯನ್ ಡಾಲರ್ ನಷ್ಟು ಮೌಲ್ಯದ ಶಸ್ತ್ರಾಸ್ತ್ರಗಳನ್ನು ಪೂರೈಕೆ ಮಾಡಿದೆ ಎಂದು ಮಾಧ್ಯಮ ವರದಿಯೊಂದರಿಂದ ತಿಳಿದುಬಂದಿದೆ.

ರಷ್ಯಾ ವಿರುದ್ಧದ ಯುದ್ಧದಲ್ಲಿ ಉಕ್ರೇನ್ ಗೆ ಶಸ್ತ್ರಾಸ್ತ್ರಗಳ ಪೂರೈಕೆಗಾಗಿ ಪಾಕಿಸ್ತಾನ ಅಮೇರಿಕಾದ 2 ಖಾಸಗಿ ಸಂಸ್ಥೆಗಳ ಜೊತೆಗೆ ಒಪ್ಪಂದ ಮಾಡಿಕೊಂಡಿತ್ತು. ಈ ಒಪ್ಪಂದದಿಂದ ಪಾಕ್ ಗೆ 364 ಮಿಲಿಯನ್ ಡಾಲರ್ ಲಭಿಸಿದೆ.

ಪಾಕಿಸ್ತಾನದ ರಾವಲ್ಪಿಂಡಿ ವಾಯುನೆಲೆ ನೂರ್ ಖಾನ್ ನಿಂದ ಸೈಪ್ರಸ್ ನಲ್ಲಿನ ಬ್ರಿಟೀಷ್ ಸೇನಾ ನೆಲೆಗೆ ಬ್ರಿಟೀಷ್ ಸೇನಾ ಸರಕು ವಿಮಾನ ಸಂಚರಿಸಿದ್ದು, ಆ ಬಳಿಕ ರೊಮೇನಿಯಾಗೆ 5 ಬಾರಿ ಸಂಚರಿಸಿದೆ ಎಂದು ಬಿಬಿಸಿ ಉರ್ದು ವರದಿ ಪ್ರಕಟಿಸಿದೆ.

ಇಸ್ಲಾಮಾಬಾದ್ ಉಕ್ರೇನ್ ಗೆ ಯಾವುದೇ ರೀತಿಯ ಶಸ್ತ್ರಾಸ್ತ್ರಗಳ ನೆರವು ನೀಡಿರುವುದನ್ನು ನಿರಂತರವಾಗಿ ನಿರಾಕರಿಸಿಕೊಂಡುಬಂದಿದೆ.



ಅಮೇರಿಕಾದ ಫೆಡರಲ್ ಖರೀದಿ ಡೇಟಾ ವ್ಯವಸ್ಥೆಯ ಗುತ್ತಿಗೆ ವಿವರಗಳನ್ನು ಉಲ್ಲೇಖಿಸಿರುವ ಬಿಬಿಸಿ, ಪಾಕಿಸ್ತಾನ 155 ಎಂಎಂ ಶೆಲ್ ಗಳ ಪೂರೈಕೆಗೆ ಅಮೇರಿಕಾದ ಗ್ಲೋಬಲ್ ಮಿಲಿಟರಿ ಹಾಗೂ ನಾರ್ತ್‌ರೋಪ್ ಗ್ರುಮ್ಮನ್ ಎಂಬ ಸಂಸ್ಥೆಗಳೊಂದಿಗೆ ಗುತ್ತಿಗೆಗೆ ಸಹಿ ಹಾಕಿದೆ ಎಂಬ ಮಾಹಿತಿಯನ್ನು ಬಹಿರಂಗಪಡಿಸಿದೆ.

ಉಕ್ರೇನ್‌ಗೆ ಶಸ್ತ್ರಾಸ್ತ್ರಗಳನ್ನು ಒದಗಿಸುವ ಈ ಒಪ್ಪಂದಗಳನ್ನು ಆಗಸ್ಟ್ 17, 2022 ರಂದು ಸಹಿ ಮಾಡಲಾಗಿದೆ ಮತ್ತು ನಿರ್ದಿಷ್ಟವಾಗಿ 155 ಎಂಎಂ ಶೆಲ್‌ಗಳ ಖರೀದಿಗೆ ಸಂಬಂಧಪಟ್ಟಿದ್ದಾಗಿದೆ ಎಂದು ವರದಿ ಹೇಳಿದೆ.

## ಚಲಿಸುತ್ತಿದ್ದ ಬೈಕ್‌ನಲ್ಲಿ ಪಟಾಕಿ ಇಟ್ಟು ವ್ಹೀಲಿಂಗ್ ಮಾಡಿದ ಪುಂಡ

ತಮಿಳುನಾಡು: ಚಲಿಸುತ್ತಿರುವ ಬೈಕ್‌ನಲ್ಲಿ ಟ್ರಾಫಿಕ್ ನಿಯಮ ಉಲ್ಲಂಘಿಸಿ ಹುಚ್ಚಾಟ ತೋರಿದ ಪುಂಡನನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ತಮಿಳುನಾಡಿನ ತಿರುಚ್ಚಿನಲ್ಲಿ ಈ ಘಟನೆ ನಡೆದಿದೆ. ಬೈಕ್‌ನಲ್ಲಿ ಪಟಾಕಿ ಇಟ್ಟು ವೀಲ್ಹಿಂಗ್ ಮಾಡಿದ ವಿಡಿಯೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಯುವಕ ರಾತ್ರಿ ವೇಳೆ ಬೈಕ್ ಮುಂಭಾಗದಲ್ಲಿ ಪಟಾಕಿ ಇಟ್ಟುಕೊಂಡು ವೇಗವಾಗಿ ಬೈಕ್ ಓಡಿಸುತ್ತಾ ವೀಲ್ಹಿಂಗ್ ಮಾಡಿದ್ದಾನೆ. 'ಡೇವಿಲ್ ರೈಡರ್' ಎನ್ನುವ ಪೇಜ್ ನಲ್ಲಿ ಈ ವಿಡಿಯೋವನ್ನು ಹಂಚಿಕೊಳ್ಳಲಾಗಿದೆ. ವಿಡಿಯೋ ವೈರಲ್ ಆದ ಬೆನ್ನಲ್ಲೇ ಪೊಲೀಸರು ವಿಡಿಯೋ ಪರಿಶೀಲಿಸಿದ್ದಾರೆ ಎಂದು ವರದಿಯಾಗಿದೆ. ಈ ಬಗ್ಗೆ ಪೊಲೀಸರು ಸವಾರನ ವಿರುದ್ಧ ಸೆಕ್ಷನ್ 279, 286 ಮತ್ತು 336 ಅಡಿಯಲ್ಲಿ ಪ್ರಕರಣ ದಾಖಲಿಸಿ ಆತನನ್ನು ಬಂಧಿಸಿದ್ದಾರೆ ಎಂದು ವರದಿಯಿಂದ ತಿಳಿದುಬಂದಿದೆ.

## ಅಯೋಧ್ಯೆ ರಾಮ ಮಂದಿರ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗಿಯಾಗಲು ವಿಹೆಚ್ ಪಿಯಿಂದ 10 ಕೋಟಿ ಕುಟುಂಬಗಳಿಗೆ ಆಹ್ವಾನ



ಅಯೋಧ್ಯೆ: ಅಯೋಧ್ಯೆಯ ರಾಮ ಮಂದಿರದಲ್ಲಿ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗಿಯಾಗಲು ವಿಶ್ವ ಹಿಂದೂ ಪರಿಷತ್ 10 ಕೋಟಿ ಕುಟುಂಬಗಳಿಗೆ ಆಹ್ವಾನ ನೀಡುವುದಾಗಿ ಹೇಳಿದೆ.

ಜ.22 ರಂದು ಅಯೋಧ್ಯೆಯಲ್ಲಿ ರಾಮಲಲ್ಲಾ ಮೂರ್ತಿ ಪ್ರತಿಷ್ಠಾಪನೆಯಾಗಲಿದೆ.

ನವದೆಹಲಿಯಲ್ಲಿ ನ.12 ರಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿರುವ ವಿಹೆಚ್ ಪಿ ಕೇಂದ್ರ ಕಾರ್ಯಾಧ್ಯಕ್ಷ ಅಲೋಕ್ ಕುಮಾರ್, ಅಕ್ಷತೆಯನ್ನೊಳಗೊಂಡ ಕಳಶ ಈಗಾಗಲೇ ದೇಶಾದ್ಯಂತ ತಲುಪಿಸಲಾಗುತ್ತಿದೆ.

ವಿಶ್ವಹಿಂದೂ ಪರಿಷತ್ ನ ಕಾರ್ಯಕರ್ತರು, ಹಿಂದೂ ಸಂಘಟನೆಗಳ ಕಾರ್ಯಕರ್ತರು ಜ.1 ರಿಂದ ಜ.15 ವರೆಗೆ ದೇಶದ ಗ್ರಾಮ, ನಗರಗಳಿಗೆ ತೆರಳಿ ಹಿಂದೂ ಕುಟುಂಬಗಳಿಗೆ ಆಹ್ವಾನ ನೀಡಲಿದ್ದಾರೆ ಎಂದು ಅಲೋಕ್ ಕುಮಾರ್ ಮಾಹಿತಿ ನೀಡಿದ್ದಾರೆ.

ವಿದೇಶಗಳಲ್ಲಿರುವ ಹಿಂದೂ ಕುಟುಂಬಗಳಿಗೆ ಆಹ್ವಾನ ನೀಡುವುದಕ್ಕಾಗಿ ಇದೇ ಮಾದರಿಯ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

## ಜೂಜುಕೋರರಿಂದ ಪೊಲೀಸರ್ ಮೇಲೆ ಹಲ್ಲೆ: ಇನ್ಸ್‌ಪೆಕ್ಟರ್ ಸೇರಿ ಸಿಬ್ಬಂದಿಗೆ ಗಾಯ



ಧಾರವಾಡ: ಇಸ್ಪಿಟ್ ಅಡ್ಡೆ ಮೇಲೆಯ ದಾಳಿ ಮಾಡಲು ಹೋದ ಪೊಲೀಸರ ಮೇಲೆಯೇ ಜೂಜುಕೋರರು ದಾಳಿ ಮಾಡಿರುವ ಘಟನೆ ಧಾರವಾಡದ ನರೇಂದ್ರ ಗ್ರಾಮದಲ್ಲಿ ನಡೆದಿದೆ.

ಧಾರವಾಡ ತಾಲೂಕಿನ ನರೇಂದ್ರ ಗ್ರಾಮದಲ್ಲಿ ಇಸ್ಪಿಟ್ ಆಟದ ಬಗ್ಗೆ ಮಾಹಿತಿ ಪಡೆದುಕೊಂಡ ಗ್ರಾಮೀಣ ಠಾಣೆಯ ಇನ್ಸ್ಟೆಕ್ಟರ್ ನಾಗರಾಜ್ ಪಾಟೀಲ್, ಜೀಪ್ ಚಾಲಕಶಿವಾನಂದ ಹುಬ್ಬಳ್ಳಿ, ಪೊಲೀಸ ಸಿಬ್ಬಂದಿ ಬಸನಗೌಡ್ ದಾಳಿ ಮಾಡಿದ್ದಾರೆ.

ಈ ವೇಳೆ ಜೂಜುಕೋರರು ದಾಳಿಗೆ ಬಂದ್ದ ಪೊಲೀಸರ ಮೇಲೆ ಹಲ್ಲೆ ಮಾಡಿ, ಪರಾರಿಯಾಗಲು ಯತ್ನಿಸಿದ್ದಾರೆ. ಇನ್ನೂ ಜೂಜುಕೋರರಿಂದ ಗಾಯವಾದ್ರೂ ಅದನ್ನು ಲೆಕ್ಕಿಸದೆ ಗ್ರಾಮೀಣ ಠಾಣೆಯ ಪೊಲೀಸರು 10 ಕ್ಕೂ ಹೆಚ್ಚು ಜೂಜುಕೋರರನ್ನು ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಗಾಯಾಳು ಪೊಲೀಸ್ ಅಧಿಕಾರಿಗಳು ಧಾರವಾಡ ಜಿಲ್ಲಾ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ. ಇತ್ತೀಚೆಗೆ ಧಾರವಾಡ ನಗರ ಸೇರಿ ಗ್ರಾಮಾಂತರ ಪ್ರದೇಶದಲ್ಲಿ ಇಸ್ಪಿಟ್ ಅಡ್ಡೆಗಳು ಯಾರ ಭಯವಿಲ್ಲದೆ ರಾಜಾರೋಷವಾಗಿ ನಡೆಯುತ್ತಿವೆ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದರು.

ಪೊಲೀಸ್ ಇಲಾಖೆ ಯಾವುದಕ್ಕೂ ಜಗ್ಗದೇ ಜೂಜುಕೋರ ಕಿಂಗ್ ಪಿನ್‌ಗಳ ಹೆಡೆಮುರಿ ಕಟ್ಟಿ ಕುಟುಂಬಗಳ ನೆಮ್ಮದಿಗೆ ದಾರಿಯಾಗಬೇಕು ಎಂದು ಜನತೆ ಮನವಿ ಮಾಡುತ್ತಿದ್ದಾರೆ.

## ನಿಗಮ, ಮಂಡಳಿ ನೇಮಕಾತಿ ಪರೀಕ್ಷೆ

### ಅಭ್ಯರ್ಥಿಗಳಿಗೆ ಡ್ರೆಸ್ ಕೋಡ್, ಕೆಇಎ ಆದೇಶ

ಬೆಂಗಳೂರು: ರಾಜ್ಯದಲ್ಲಿ ನವೆಂಬರ್ 18 ಮತ್ತು 19 ರಂದು ನಡೆಯಲಿರುವ ವಿವಿಧ ನಿಗಮ ಮತ್ತು ಮಂಡಳಿಗಳ ನೇಮಕಾತಿ ಪರೀಕ್ಷೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಡ್ರೆಸ್ ಕೋಡ್ ಆದೇಶ ಹೊರಡಿಸಿದೆ.

ಎಲೆಕ್ಟ್ರಾನಿಕ್ ಸಾಧನಗಳು, ಮೊಬೈಲ್ ಫೋನ್‌ಗಳು, ಪೆನ್ ಡ್ರೈವ್‌ಗಳು, ಇಯರ್‌ಫೋನ್‌ಗಳು, ಮೈಕ್ರೊಫೋನ್‌ಗಳು, ಬ್ಲೂಟೂತ್ ಸಾಧನಗಳು ಮತ್ತು ಕೈಗಡಿಯಾರಗಳನ್ನು ಒಳಗೊಂಡಿರುವ ನಿಷೇಧಿತ ವಸ್ತುಗಳ ಪಟ್ಟಿಯನ್ನು ಕೆಇಎ ಬಿಡುಗಡೆ ಮಾಡಿದೆ.

ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಗಳಲ್ಲಿ ಅವುಗಳನ್ನು ಬಳಸಲು ಅನುಮತಿಸಲಾಗುವುದಿಲ್ಲ. ಪರೀಕ್ಷಾ ಕೊಠಡಿಯಲ್ಲಿ ಬ್ಲೂಟೂತ್ ಸಾಧನಗಳ ಬಳಕೆಯನ್ನು ತಡೆಯಲು ಶಿರವಸ್ತ್ರ ಧರಿಸಲು ಅಥವಾ ಇನ್ನಾವುದೇ ಬಟ್ಟೆಯನ್ನು ಧರಿಸುವುದನ್ನು ನಿಷೇಧಿಸಲಾಗಿದೆ. ಮಾಸ್ಕ್ ಗಳನ್ನೂ ಸಹ ನಿಷೇಧಿಸಲಾಗಿದೆ.

ಪೆನ್ಸಿಲ್, ಪೇಪರ್, ಎರೇಸರ್, ಜ್ಯಾಮಿಟ್ರಿ ಬಾಕ್ಸ್‌ಗಳು ಮತ್ತು ಲಾಗ್ ಟೇಬಲ್‌ಗಳನ್ನು ಸಹ ನಿರ್ಬಂಧಿಸಲಾಗಿದೆ. ಮಹಿಳಾ ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ, ಹೂವುಗಳು ಅಥವಾ ಗುಂಡಿಗಳನ್ನು ಹೊಂದಿರುವ ಬಟ್ಟೆಗಳನ್ನು ಧರಿಸಲು ಅನುಮತಿಸಲಾಗುವುದಿಲ್ಲ.

ಪರೀಕ್ಷಾ ಕೊಠಡಿಯೊಳಗೆ ಪೂರ್ಣ ತೋಳಿನ ಬಟ್ಟೆ, ಜೀನ್ಸ್ ಪ್ಯಾಂಟ್, ಎತ್ತರದ ಹಿಮ್ಮಡಿಯ ಬೂಟುಗಳು ಅಥವಾ ಚಪ್ಪಲಿಗಳನ್ನು ಧರಿಸುವುದನ್ನು ಸಹ ನಿರ್ಬಂಧಿಸಲಾಗಿದೆ. ಮಹಿಳಾ ಅಭ್ಯರ್ಥಿಗಳಿಗೆ ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ ಯಾವುದೇ ಅಭ್ಯರ್ಥಿಯು ಕುತ್ತಿಗೆಯ ಸುತ್ತ ಲೋಹದ ಆಭರಣ ಧರಿಸುವುದು, ಅಥವಾ ಕಿವಿಯೋಲೆ, ಉಂಗುರ, ಕಡಗ ಧರಿಸುವುದನ್ನು ನಿರ್ಬಂಧಿಸಲಾಗಿದೆ. ಅಂತಯೇ, ಬಾಯಿ, ಕಿವಿ ಹಾಗೂ ತಲೆ ಮುಚ್ಚುವ ರೀತಿಯಲ್ಲಿ ಯಾವುದೇ ವಸ್ತ್ರ/ ಸಾಧನ ಧರಿಸುವುದನ್ನು ನಿಷೇಧಿಸಲಾಗಿದೆ.

ಪರೀಕ್ಷೆಯ ದಿನದಂದು ಪುರುಷ ಅಭ್ಯರ್ಥಿಗಳಿಗೆ ಪೂರ್ಣ ತೋಳಿನ ಶರ್ಟ್‌ಗಳನ್ನು ಅನುಮತಿಸದ ಕಾರಣ ಅರ್ಧ ತೋಳಿನ ಶರ್ಟ್‌ಗಳನ್ನು ಧರಿಸಲು ತಿಳಿಸಲಾಗಿದೆ. ಕುರ್ತಾ ಪೈಜಾಮ, ಜೀನ್ಸ್ ಪ್ಯಾಂಟ್ ಧರಿಸಿ ಪರೀಕ್ಷೆಗೆ ಹಾಜರಾಗಲು ಅವಕಾಶ ಇರುವುದಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ. ಧರಿಸುವ ಬಟ್ಟೆಗಳು ಹಗುರವಾಗಿದ್ದು ದೊಡ್ಡ ಎಂಬ್ರಾಯಿಡರಿ, ಜಿಪ್ ಪಾಕೆಟ್‌ಗಳು, ದೊಡ್ಡ ಬಟನ್‌ಗಳು- ಇವುಗಳನ್ನು ಹೊಂದಿರಬಾರದು ಎಂದು ತಿಳಿಸಲಾಗಿದೆ. ಅಭ್ಯರ್ಥಿಗಳು ಶೂ ಹಾಕಿಕೊಂಡು ಪರೀಕ್ಷೆಗೆ ಹಾಜರಾಗುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.

# ತಾಯಿ, ಮೂವರು ಮಕ್ಕಳ ಕೊಲೆ ಕೇಸ್

## ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ಉಡುಪಿ ಜಿಲ್ಲೆ ನೇಜಾರುವಿನಲ್ಲಿ ನಡೆದ ತಾಯಿ ಮತ್ತು ಮೂವರು ಮಕ್ಕಳ ಅಮಾನುಷ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕುಟುಂಬಸ್ಥರೊಂದಿಗೆ ದೂರವಾಣಿ ಮೂಲಕ ಮಂಗಳವಾರ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಅವರಿಗೆ ಸಾಂತ್ವನ ಹೇಳಿದರು.

ಮೃತ ಮಹಿಳೆಯ ಸಹೋದರರಿಗೆ ಕರೆ ಮಾಡಿ ಸಂಪೂರ್ಣ ಮಾಹಿತಿ ಪಡೆದ ಲಕ್ಷ್ಮೀ ಹೆಬ್ಬಾಳಕರ್, ನಿಮ್ಮೊಂದಿಗೆ ನಾವಿದ್ದೇವೆ.

ಸೂಕ್ತ ತನಿಖೆ ನಡೆಸಿ ಅಪರಾಧಿಗಳನ್ನು ಪತ್ತೆ ಹಚ್ಚಲಾಗುವುದು ಎಂದು ಧೈರ್ಯ ತುಂಬಿದರು.



ಘಟನೆ ನಡೆದ ತಕ್ಷಣ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಜೊತೆ ಮಾತನಾಡಿದ್ದ ಸಚಿವರು, ಘಟನೆ ಕುರಿತಂತೆ ಸೂಕ್ತ ತನಿಖೆ ಕೈಗೊಳ್ಳಲು ನಿರ್ದೇಶನ ನೀಡಿದ್ದರು.

ತನಿಖೆಯ ಕುರಿತು ನಿರಂತರ ಮಾಹಿತಿ ಪಡೆಯುತ್ತಿರುವ ಲಕ್ಷ್ಮೀ ಹೆಬ್ಬಾಳಕರ್, ಆದಷ್ಟು ಬೇಗ ಅಪರಾಧಿಗಳನ್ನು ಪತ್ತೆ ಹಚ್ಚುವಂತೆ ಸೂಚಿಸಿದ್ದಾರೆ.

## ಬೆಂಗಳೂರು: ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ್ಯ, ಬ್ಲಾಕ್‌ಮೇಲ್ ಮಾಡಿದ ಉಪನ್ಯಾಸಕನ ಬಂಧನ

ಬೆಂಗಳೂರು: ನಗರದಲ್ಲಿ ಪಾರ್ಟ್ ಟೈಂ ಕೆಲಸ ಕೊಡಿಸುವ ನೆಪದಲ್ಲಿ ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಪೊಲೀಸರು ಮಂಗಳವಾರ ಉಪನ್ಯಾಸಕರನ್ನು ಬಂಧಿಸಿದ್ದಾರೆ.

ಬೆಂಗಳೂರಿನ ಯಲಹಂಕದ ಖಾಸಗಿ ಕಾಲೇಜಿನ ಉಪನ್ಯಾಸಕ ಮದಮ್ ಕುಮಾರ್ ಎಂಬಾತ ಕೆಲಸ ಕೊಡಿಸುವುದಾಗಿ ಹೇಳಿ ವಿದ್ಯಾರ್ಥಿನಿಯನ್ನು ಎಂಜಿ



ರಸ್ತೆಯಲ್ಲಿರುವ ಹೋಟೆಲ್‌ಗೆ ಕರೆದೊಯ್ದು ಲೈಂಗಿಕ ದೌರ್ಜನ್ಯ ಎಸಗಿದ್ದ.

ಅಲ್ಲದೇ ಘಟನೆಯನ್ನು ಚಿತ್ರೀಕರಿಸಿ ಆಕೆಗೆ ಬ್ಲಾಕ್ ಮೇಲ್ ಮಾಡಿದ್ದ.

ಚಿತ್ರಹಿಂಸೆ ತಾಳಲಾರದೆ ಸಂತ್ರಸ್ತೆ ಗಂಗಮ್ಮನಗುಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ದೂರಿನ ಆಧಾರದ ಮೇಲೆ ಪೊಲೀಸರು ಆರೋಪಿಯನ್ನು ಮಂಗಳವಾರ ಬೆಳಗ್ಗೆ ಬಂಧಿಸಿದ್ದಾರೆ.

# ತೆಲಂಗಾಣ ವಿಧಾನಸಭೆ ಚುನಾವಣೆ ಕಾರ್ಯತಂತ್ರದಲ್ಲಿ ಚನ್ನರಾಜ ಹಟ್ಟಿಹೊಳಿ

ಹೈದರಾಬಾದ್: ತೆಲಂಗಾಣ ವಿಧಾನಸಭೆ ಚುನಾವಣೆಗೆ ವೀಕ್ಷಕರಾಗಿ ನೇಮಕವಾಗಿರುವ ಬೆಳಗಾವಿ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಹೈದರಾಬಾದ್ ನಲ್ಲಿರುವ ಟಿಪಿಸಿಸಿ ಕಚೇರಿಗೆ ಭೇಟಿ ನೀಡಿ ಪೂರ್ವಭಾವಿ ಸಭೆ ನಡೆಸಿದರು.

ವನಪರ್ತಿ ವಿಧಾನಸಭಾ ಕ್ಷೇತ್ರಕ್ಕೆ ಚನ್ನರಾಜ ಹಟ್ಟಿಹೊಳಿ ಅವರನ್ನು ವೀಕ್ಷಕರನ್ನಾಗಿ ನೇಮಕ ಮಾಡಲಾಗಿದೆ. ಕ್ಷೇತ್ರದ ಹಾಗೂ ಅಭ್ಯರ್ಥಿಯ ಮಾಹಿತಿ ಪಡೆದು, ಸ್ಥಳೀಯ ಮುಖಂಡರೊಂದಿಗೆ ಸುದೀರ್ಘ ಚರ್ಚೆ ನಡೆಸಿದ ಅವರು, ಕರ್ನಾಟಕದಲ್ಲಿ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಕಾರ್ಯತಂತ್ರಗಳ ಕುರಿತು ವಿವರಿಸಿದರು.

ಕಾರ್ಯಕರ್ತರ ಜವಾಬ್ದಾರಿ ದೊಡ್ಡದಿದ್ದು, ಗ್ಯಾರಂಟಿ ಕಾರ್ಡ್ ಗಳನ್ನು ಮನೆ ಮನೆಗೆ ತಲುಪಿಸಬೇಕು. ಕಾಂಗ್ರೆಸ್ ಇತಿಹಾಸ, ಸಾಧನೆಗಳನ್ನು ಜನರಿಗೆ ವಿವರಿಸಬೇಕು. ಕರ್ನಾಟಕದಲ್ಲಿ ಪಂಚ ಗ್ಯಾರಂಟಿ ಘೋಷಿಸಿದ ಕಾಂಗ್ರೆಸ್, ಚುನಾವಣೆಯಲ್ಲಿ ಗೆದ್ದ ತಕ್ಷಣ



ಅವುಗಳನ್ನು ಜಾರಿಗೊಳಿಸಿರುವುದನ್ನು ಕ್ಷೇತ್ರದ ಜನರಿಗೆ ತಿಳಿಸಬೇಕು. ಗ್ಯಾರಂಟಿ ಯೋಜನೆಗಳಿಂದಾಗಿ ಮಹಿಳೆಯರಿಗೆ ಹಾಗೂ ಜನಸಾಮಾನ್ಯರಿಗೆ ಯಾವ ರೀತಿಯಲ್ಲಿ ಪ್ರಯೋಜನವಾಗಿದೆ, ಗೃಹಲಕ್ಷ್ಮೀ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ ಯೋಜನೆಗಳನ್ನು ಜನರ ಜೀವನದಲ್ಲಿ ಯಾವ ರೀತಿ ಬದಲಾವಣೆ ತರುತ್ತಿವೆ ಎನ್ನುವುದನ್ನು ಜನರಿಗೆ ಮನಮುಟ್ಟುವಂತೆ ವಿವರಿಸಬೇಕು ಎಂದು ಚನ್ನರಾಜ ಪಕ್ಷದ ಮುಖಂಡರಿಗೆ ತಿಳಿಸಿದರು.

ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳ ಪ್ರಯೋಜನ ಪಡೆದಿರುವ ಮಹಿಳೆಯರು, ದೇವಸ್ಥಾನಗಳಿಗೆ ಉಚಿತವಾಗಿ ಬಸ್ ಗಳಲ್ಲಿ ತೆರಳಿ ಸರಕಾರದ ಹೆಸರಿನಲ್ಲಿ, ಮುಖ್ಯಮಂತ್ರಿಗಳ ಹಾಗೂ ಉಪಮುಖ್ಯಮಂತ್ರಿಗಳ ಹೆಸರಿನಲ್ಲಿ ಹಾಗೂ ಸಂಬಂಧಿಸಿದ ಸಚಿವರ ಹೆಸರಿನಲ್ಲಿ ಅರ್ಚನೆ ಮಾಡಿಸುತ್ತಿದ್ದಾರೆ.

ದೇವಸ್ಥಾನಗಳ ಆದಾಯವೂ ಹೆಚ್ಚಾಗಿದೆ. ಕರ್ನಾಟಕದ ಜಿಡಿಪಿ ಬೆಳವಣಿಗೆಗೆ ಗ್ಯಾರಂಟಿ ಯೋಜನೆಗಳು ನೆರವಾಗುತ್ತಿವೆ ಎನ್ನುವ ಮಾಹಿತಿಯನ್ನು ಚನ್ನರಾಜ ಹಟ್ಟಿಹೊಳಿ ತೆಲಂಗಾಣ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರಿಗೆ ವಿವರಿಸಿ, ತೆಲಂಗಾಣದಲ್ಲೂ ಇದೇ ಮಾದರಿಯಲ್ಲಿ ಚುನಾವಣೆ ಎದುರಿಸಬೇಕು ಎಂದು ಸಲಹೆ ನೀಡಿದರು.

# ಬಸ್‌ನಲ್ಲಿ ಸೀಟ್‌ಗಾಗಿ ಇಬ್ಬರು ನಾರಿಯರ ಮಧ್ಯೆ ಜಗಳ; ಚಪ್ಪಲಿಯಿಂದ ಹೊಡೆದಾಟ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಡ್ಯಾಂ-ಬೆಳಗಾವಿ ಮಾರ್ಗದಲ್ಲಿ ಸಂಚರಿಸುವ ಬಸ್‌ನಲ್ಲಿ ಮಹಿಳೆಯರ ಮಧ್ಯೆ ಮಾರಾಮಾರಿ ನಡೆದಿದೆ.



ಹಿಡಕಲ್ ಡ್ಯಾಂ-ಬೆಳಗಾವಿ ಮಾರ್ಗದಲ್ಲಿ ಹೋಗುವ ಬಸ್‌ನಲ್ಲಿ ನಡೆದಿದೆ ಎನ್ನಲಾದ ಈ ಗಲಾಟೆಯ ವಿಡಿಯೋ ವೈರಲ್ ಆಗುತ್ತಿದೆ.

ಇಬ್ಬರು ಮಹಿಳೆಯರು ಸೀಟಿನ ವಿಚಾರಕ್ಕೆ ಜಗಳ ಮಾಡಿಕೊಂಡಿದ್ದು, ಮಾತಿಗೆ ಮಾತು ಬೆಳೆದಿದೆ. ಈ ವೇಳೆ ಸೀಟಿನಲ್ಲಿ ಕುಳಿತಿದ್ದ ಮಹಿಳೆ ನಿಂತುಕೊಂಡಿದ್ದ ಮಹಿಳೆ ಮೇಲೆ ಹಲ್ಲೆ ಮಾಡಿದ್ದಾಳೆ.

ಆಕೆಯ ಜತೆಗಿದ್ದ ಸುಮಾರು 10 ವರ್ಷದ ಬಾಲಕಿ ಸೀಟಿನಲ್ಲಿ ಕುಳಿತ ಮಹಿಳೆಯನ್ನು ತಡೆಯಲು ಮುಂದಾಗಿದ್ದಾಳೆ. ಆಗ ಸೀಟಿನಲ್ಲಿ ಕುಳಿತಿದ್ದ ಮಹಿಳೆ ತನ್ನ ಚಪ್ಪಲಿಯಿಂದ ಹಲ್ಲೆ ನಡೆಸಿದ್ದಾಳೆ.

ಮತ್ತೋರ್ವ ಮಹಿಳೆ ಇದನ್ನು ತಡೆಯಲು ಯತ್ನಿಸಿದರೂ ಪ್ರಯೋಜನವಾಗಲಿಲ್ಲ. ಬಳಿಕ ವ್ಯಕ್ತಿಯೊಬ್ಬ ಮುಂದೆ ಬಂದು ಸೀಟಿನಲ್ಲಿದ್ದ ಮಹಿಳೆಯ ಕೈಯಿಂದ ಚಪ್ಪಲಿ ಕಿತ್ತುಕೊಂಡು ಆಕೆಗೂ ಒಂದು ಬಾರಿಸಿ ಪರಿಸ್ಥಿತಿ ತಿಳಿಗೊಳಿಸಲು ಪ್ರಯತ್ನಿಸಿದ್ದಾನೆ.

ಈ ವೇಳೆ ಹಲವಾರು ಪ್ರಯಾಣಿಕರು ಸೇರಿ ಪರಿಸ್ಥಿತಿಯನ್ನು ನಿಯಂತ್ರಿಸುವುದನ್ನು ವಿಡಿಯೋದಲ್ಲಿ ಕಾಣಬಹುದು

# ಹಿರಣ್ಯಕೇಶಿ, ವಿಶ್ವರಾಜ, ಸಂಗಮ ಕಾರ್ಖಾನೆ: ಪ್ರತಿ ಟನ್ ಕಬ್ಬಿಗೆ 3 ಸಾವಿರ ದರ ಘೋಷಣೆ

ಹುಕ್ಕೇರಿ: ತಾಲೂಕಿನ ಸಂಕೇಶ್ವರ ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆ, ಬೆಲ್ಲದ ಬಾಗೇವಾಡಿ ವಿಶ್ವರಾಜ್ ಶುರ್ಸ್ ಮತ್ತು ಹಿಡಕಲ್ ಡ್ಯಾಮ್ ಸಂಗಮ ಸಹಕಾರಿ ಸಕ್ಕರೆ ಕಾರ್ಖಾನೆಗಳಿಗೆ ಪ್ರಸಕ್ತ 2023–24ನೇ ಸಾಲಿನ ಕಬ್ಬು ನುರಿಸುವ ಹಂಗಾಮಿನಲ್ಲಿ ಪೂರೈಸುವ ಪ್ರತಿ ಟನ್ ಕಬ್ಬಿಗೆ 3000 ಸಾವಿರ ರೂ ದರ ನೀಡಲಾಗುವುದು ಎಂದು ಉದ್ಯಮಿ ಪೃಥ್ವಿ ಕತ್ತಿ ಘೋಷಿಸಿದರು.



ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮೂರು ಕಾರ್ಖಾನೆಗಳಿಂದ ಪ್ರಸಕ್ತ ಹಂಗಾಮಿನಲ್ಲಿ ಪ್ರತಿ ಟನ್ ಕಬ್ಬಿಗೆ ಮೂರು ಸಾವಿರ ರೂ ದರ ಪಾವತಿಸಲು ಆಡಳಿತ ಮಂಡಳಿಗಳು ನಿರ್ಧರಿಸಿವೆ ಎಂದು ಪ್ರಕಟಿಸಿದರು.

ಬೆಲ್ಲದ ಬಾಗೇವಾಡಿ ವಿಶ್ವರಾಜ ಶುರ್ಸ್ ಅಧ್ಯಕ್ಷರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ, ಸಂಕೇಶ್ವರ ಹಿರಣ್ಯಕೇಶಿ ಕಾರ್ಖಾನೆಯ ಅಧ್ಯಕ್ಷರೂ ಆದ ಶಾಸಕ ನಿಖಿಲ ಕತ್ತಿ, ಹಿಡಕಲ್ ಡ್ಯಾಮ್ ಸಂಗಮ ಕಾರ್ಖಾನೆ ಅಧ್ಯಕ್ಷ ರಾಜೇಂದ್ರ ಪಾಟೀಲ ಹಾಗೂ ಆಡಳಿತ ಮಂಡಳಿಯವರು ಚರ್ಚಿಸಿ ರೈತರಿಗೆ ಈ ದರ ನೀಡಲು ಅಂತಿಮ ನಿರ್ಣಯ ಕೈಗೊಂಡಿದ್ದಾರೆ. ಈ ಮೂಲಕ ಕಬ್ಬು ಬೆಳೆಗಾರರಿಗೆ ದೀಪಾವಳಿ ಹಬ್ಬದ ಸಿಹಿ ಸುದ್ದಿ ನೀಡಿದಂತಾಗಿದೆ ಎಂದು ಅವರು ಹೇಳಿದರು.

ತಾಲೂಕಿನ ರೈತರ ಆರ್ಥಿಕ ಅಭ್ಯುದಯಕ್ಕೆ ಈ ಮೂರು ಕಾರ್ಖಾನೆಗಳು ಶ್ರಮಿಸುತ್ತಿವೆ. ಇಲ್ಲಿಯವರೆಗೆ ಆಡಳಿತ ಮಂಡಳಿ ಪ್ರತಿ ವರ್ಷ ಘೋಷಿಸಿದ ದರ ನೀಡುತ್ತ ಬಂದಿದ್ದು ರೈತರೂ ಸಹ ತಾವು ಬೆಳೆದ ಕಬ್ಬನ್ನು ಈ ಕಾರ್ಖಾನೆಗಳಿಗೆ ಪೂರೈಸಿದ್ದಾರೆ. ಪ್ರಸಕ್ತ ವರ್ಷ ಮಳೆ ಕೊರತೆಯಿಂದ ನೀರಿಕ್ಷಿಸಿದಷ್ಟು ಕಬ್ಬು ಬೆಳೆ ಬಂದಿಲ್ಲ. ಆದಾಗ್ಯೂ ಈ ವರ್ಷ ಸಹ ಎಂದಿನಂತೆ ನಿಗದಿತ ಪ್ರಮಾಣದಲ್ಲಿ ಕಬ್ಬು ನುರಿಸಿ ಸಕ್ಕರೆ ಉತ್ಪಾದಿಸುವ ಸಂಕಲ್ಪ ಆಡಳಿತ ಮಂಡಳಿಯವರದ್ದಾಗಿದೆ ಎಂದು ಅವರು ತಿಳಿಸಿದರು.

# ಬ್ರಿಟನ್: ಬೆಂಕಿ ಅವಘಡದಲ್ಲಿ ಮೂರು ಮಕ್ಕಳು ಸೇರಿದಂತೆ ಭಾರತೀಯ ಮೂಲದ ಕುಟುಂಬದ ಐವರ ಸಾವು

ಲಂಡನ್: ಪಶ್ಚಿಮ ಲಂಡನ್‌ನ ಮನೆಯೊಂದರಲ್ಲಿ ಸಂಭವಿಸಿದ ಬೆಂಕಿಯಲ್ಲಿ ಮೂವರು ಮಕ್ಕಳು ಸೇರಿದಂತೆ ಒಂದೇ ಕುಟುಂಬದ ಐವರು ಸಾವನ್ನಪ್ಪಿದ್ದಾರೆ. ಘಟನೆಯ ಕುರಿತು ಸೋಮವಾರದಂದು ಮೆಟ್ರೋಪಾಲಿಟನ್ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಪೊಲೀಸರು ಇನ್ನೂ ಮೃತರನ್ನು ಹೆಸರಿಸಿಲ್ಲ, ಆದರೆ ಸ್ಥಳೀಯ ವರದಿಗಳ ಪ್ರಕಾರ ಕುಟುಂಬವು ಭಾರತೀಯ ಮೂಲದವರಾಗಿದ್ದು, ಭಾನುವಾರ ರಾತ್ರಿ ಬೆಂಕಿ ಸಂಭವಿಸುವ ಮೊದಲು ದೀಪಾವಳಿಯನ್ನು ಆಚರಿಸುತ್ತಿದ್ದರು ಎಂದು ಹೇಳಲಾಗಿದೆ.

ಅಗ್ನಿ ಅವಘಡದಲ್ಲಿ ಗಾಯಗೊಂಡಿರುವ ವ್ಯಕ್ತಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಆದರೆ, ಅವರ ಜೀವಕ್ಕೆ ಯಾವುದೇ ಬೆದರಿಕೆ ಇಲ್ಲ.

ಹೌನ್ಸ್ಲೋದಲ್ಲಿ ಪೊಲೀಸ್ ನಿಯೋಜನೆಯ ಜವಾಬ್ದಾರಿಯನ್ನು ಹೊಂದಿರುವ ಮೆಟ್ರೋ ಪಾಲಿಟನ್ ಪೊಲೀಸ್ ಮುಖ್ಯ ಅಧೀಕ್ಷಕ



ಸೀನ್ ವಿಲ್ಸನ್ ಹೇಳಿದರು. ಈ ದುರಂತ ಘಟನೆಯಲ್ಲಿ ಪ್ರಾಣ ಕಳೆದುಕೊಂಡವರ ಪ್ರೀತಿಪಾತ್ರರ ಜೊತೆಯಲ್ಲಿ ನಾವಿರುತ್ತೇವೆ ಎಂದು ಹೇಳಿದರು.

ಇದು ವಿಶಾಲ ಸಮುದಾಯ ಮತ್ತು ಅದರಾಚೆಗೆ ಬೀರುವ ಪರಿಣಾಮವನ್ನು ನಾನು ಕಡಿಮೆ ಅಂದಾಜು ಮಾಡುವುದಿಲ್ಲ ಎಂದು ಅವರು ಹೇಳಿದರು. ಕಾರಣಗಳಿಗಾಗಿ ಬೇಡಿಕೆ ಇರುತ್ತದೆ.

ಏನಾಯಿತು ಎಂಬುದನ್ನು ನಿಖರವಾಗಿ ನಿರ್ಧರಿಸಲು ನನ್ನ ಅಧಿಕಾರಿಗಳು ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಲಂಡನ್ ಅಗ್ನಿಶಾಮಕ ದಳ ಮತ್ತು ಲಂಡನ್ ಆಂಬ್ಯುಲೆನ್ಸ್ ಸೇವೆ **(LAS)** ಯ ಹಲವಾರು ಅಗ್ನಿಶಾಮಕ ಸಿಬ್ಬಂದಿಯೊಂದಿಗೆ ಕೆಲಸ ಮಾಡುವ ಅಧಿಕಾರಿಗಳು ಭಾನುವಾರ ಸ್ಥಳೀಯ ಸಮಯ ಸುಮಾರು 12.30 ಕ್ಕೆ ಹೌನ್‌ಸ್ಲೋದ ಚಾನೆಲ್ ಕ್ಲೋಸ್‌ನಲ್ಲಿರುವ ವಸತಿ ವಿಳಾಸದಲ್ಲಿ ಅಗ್ನಿ ಅವಘಡದ ಕರೆ ಸ್ವೀಕರಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಐವರ ಮೃತದೇಹಗಳು ಮನೆಯೊಳಗೆ ಪತ್ತೆಯಾಗಿದ್ದು, ಆರನೇ ವ್ಯಕ್ತಿ ಎಲ್ಲಿದ್ದಾನೆ ಎಂಬುದು ಸದ್ಯಕ್ಕೆ ತಿಳಿದುಬಂದಿಲ್ಲ.

ಐವರು ಒಂದೇ ಕುಟುಂಬದವರು ಎಂದು ನಂಬಲಾಗಿದೆ ಎಂದು ಮೆಟ್ರೋಪಾಲಿಟನ್ ಪೊಲೀಸರು ತಿಳಿಸಿದ್ದಾರೆ.

ತುರ್ತು ಸೇವೆಗಳು ಬರುವ ಮೊದಲು ಒಬ್ಬ ವ್ಯಕ್ತಿ ಮನೆಯಿಂದ ಹೊರಹೋಗಿದ್ದಾನೆ. ಅವರನ್ನು ಐಂಖ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅವರ ಗಾಯಗಳಿಂದ ಜೀವಕ್ಕೆ ಅಪಾಯವಿಲ್ಲ ಎಂದು ಹೇಳಲಾಗುತ್ತಿದೆ ಎಂದರು.

# ಹುಕ್ಕೇರಿಯಲ್ಲಿ ವೈದ್ಯನ ನಿರ್ಲಕ್ಷ್ಯ: ಯುವಕ ಸಾವು

ಹುಕ್ಕೇರಿ : ಇಲ್ಲಿನ ಖಾಸಗಿ ಆಸ್ಪತ್ರೆಯೊಂದರಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆದ ಯುವಕನೋರ್ವನಿಗೆ ಚುಚ್ಚುಮದ್ದು ಅಡ್ಡಪರಿಣಾಮ ಬೀರಿ ಮೃತಪಟ್ಟ ಬಗ್ಗೆ ವರದಿಯಾಗಿದೆ.

ಲ್ಲಿಯ ಮೋಸಿನ್ ಆದಮ್ ಕೋಲಾರ (25) ಮೃತಪಟ್ಟ ಯುವಕ. ಈತ ಇಲ್ಲಿನ ಗಾಂಧಿನಗರದ ಲೈಫ್‌ಲೈನ್ ಆಸ್ಪತ್ರೆಯಲ್ಲಿ ಡಾ.ಅರ್ಷದಅಯೂಬ್ ಮಹ್ಮದರಫೀಕ್ ಮಕಾನದಾರ ಎಂಬ ವೈದ್ಯರಿಂದ ಕಳೆದ ದಿ.10 ರಂದು ವೈದ್ಯಕೀಯ ಚಿಕಿತ್ಸೆ ಪಡೆದಿದ್ದಾನೆ. ಯುವಕ ಮೋಸಿನ್‌ಗೆ ವೈದ್ಯ ಡಾ.ಅರ್ಷದಅಯೂಬ್ ನೀಡಿರುವ ಚುಚ್ಚುಮದ್ದು ಅಡ್ಡ ಪರಿಣಾಮ ಬೀರಿ ಗ್ಯಾಸ್ ಗ್ಯಾಂಗ್ರೀನ್ ಆಗಿದ್ದರಿಂದ ಬೆಳಗಾವಿ ವೇಣುಗ್ರಾಮ್ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗೆ ದಾಖಲಾಗಿದ್ದ. ಆದರೆ, ಚಿಕಿತ್ಸೆ ಫಲಿಸದೇ



ಭಾನುವಾರ ಕೊನೆಯುಸಿರೆಳೆದಿದಾರೆ.

ಸರಿಯಾಗಿ ವೈದ್ಯಕೀಯ ಉಪಚಾರ ಮಾಡದಿರುವುದು, ತಮ್ಮ ಮಗನ ಸಾವಿಗೆ ವೈದ್ಯನ ನಿರ್ಲಕ್ಷ್ಯ ಕಾರಣ ಎಂದು ಮೃತ ಯುವಕನ ತಂದೆ ಆದಮ್ ಮೋದಿನಸಾಬ ಕೋಲಾರ ದೂರು ದಾಖಲಿಸಿದ್ದಾರೆ. ಈ ಸಂಬಂಧ ವೈದ್ಯ ಡಾ.ಅರ್ಷದಅಯೂಬ್ ಮಕಾನದಾರ ಅವರನ್ನು ಬಂಧಿಸಲಾಗಿದೆ. ಹುಕ್ಕೇರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ನಡೆದಿದೆ.

ಇನ್ನು ಯುವಕನ ಸಾವಿಗೆ ವೈದ್ಯನ ನಿರ್ಲಕ್ಷ್ಯ ವೇ ಪ್ರಮುಖ ಕಾರಣವಾಗಿದ್ದು ಈ ಹಿಂದೆಯೂ ಮರ್ನಾಲ್ಕು ಜನರು ಮೃತಪಟ್ಟಿದ್ದಾರೆ. ಕೂಡಲೇ ವೈದ್ಯನ ವಿರುದ್ಧ ಕಠಿಣ ಕ್ರಮಕೈಗೊಂಡು, ಆಸ್ಪತ್ರೆಯ ಪರವಾನಗಿ ರದ್ದುಪಡಿಸಬೇಕು ಎಂದು ಮೃತನ ಸಂಬಂಧಿಕರು ಹಾಗೂ ಸಾರ್ವಜನಿಕರು ಪಟ್ಟು ಹಿಡಿದರು. ಇದರಿಂದ ಕೆಲಕಾಲ ಈ ಪ್ರದೇಶದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ಸುದ್ದಿ ತಿಳಿದ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದರು.

# ಶಕ್ತಿ ಯೋಜನೆ ಸೌಲಭ್ಯ: ಮಹಿಳೆಯರು ಮೊಬೈಲ್ ಡಿಜಿಲಾಕರ್ ನಲ್ಲಿ ಐಡಿ ಪ್ರೂಫ್ ತೋರಿಸಿ ಪ್ರಯಾಣಿಸಲು ಅವಕಾಶ

ಬೆಂಗಳೂರು: ಇನ್ನು ಮುಂದೆ ಮಹಿಳಾ ಪ್ರಯಾಣಿಕರು ಡಿಜಿಲಾಕರ್ ಆ್ಯಪ್ ಮೂಲಕ ತಮ್ಮ ಫೋನ್‌ನಲ್ಲಿ ಸ್ಥಳೀಯ ನಿವಾಸದ ಪುರಾವೆಗಳನ್ನು ತೋರಿಸಿ ಶಕ್ತಿ ಯೋಜನೆಯಡಿ ರಾಜ್ಯ ಸರ್ಕಾರಿ ಬಸ್‌ಗಳಲ್ಲಿ ಪ್ರಯಾಣಿಸಬಹುದು. ಇನ್ನು ಮುಂದೆ ಅವರ ಐಡಿಗಳ (ಮೂಲ ಅಥವಾ ಫೋಟೊಕಾಪಿ) ಮೂಲ ಪ್ರತಿಯನ್ನು ಒಯ್ಯುವ ಅಗತ್ಯವಿರುವುದಿಲ್ಲ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (KSRTC), ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (KKRTC) ಮತ್ತು ವಾಯವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (NWKRTC) ಯಾದ್ಯಂತ ಮಹಿಳಾ ಪ್ರಯಾಣಿಕರು ಪದೇ ಪದೇ ಅಧಿಕಾರಿಗಳಿಗೆ ದೂರು ನೀಡಿದ್ದು, ಮೂಲ ಆಧಾರ್ ಕಾರ್ಡು ತರದಿದ್ದರೆ ಟಿಕೆಟ್ ಖರೀದಿಸುವಂತೆ ಕಂಡಕ್ಟರ್‌ಗಳು ಒತ್ತಾಯಿಸುತ್ತಾರೆ ಎಂದು ಹೇಳುತ್ತಿದ್ದರು.

"ಮಹಿಳಾ ಪ್ರಯಾಣಿಕರು ಡಿಜಿಲಾಕರ್ ಅಪ್ಲಿಕೇಶನ್ ಮೂಲಕ ತಮ್ಮ ಐಡಿಗಳನ್ನು ತೋರಿಸಲು ಅವಕಾಶವಿದ್ದರೂ, ಅನೇಕ ಕಂಡಕ್ಟರ್‌ಗಳು ಅದನ್ನು ತಿರಸ್ಕರಿಸುತ್ತಿದ್ದರು.

ಹಾರ್ಡ್ ಕಾಪಿಗಳನ್ನು ಒತ್ತಾಯಿಸುತ್ತಿದ್ದಾರೆ ಎಂದು ಕೆಎಸ್‌ಆರ್ಟಿಸಿ ಪ್ರಯಾಣಿಕರಾದ ಧನಲಕ್ಷ್ಮಿ ಹೇಳಿದರು.

ನವೆಂಬರ್ 3 ರಂದು ಕೆಎಸ್‌ಆರ್ಟಿಸಿ ಮುಖ್ಯ ಸಂಚಾರ ವ್ಯವಸ್ಥಾಪಕರ ಪತ್ರವನ್ನು ಉಲ್ಲೇಖಿಸಿ, ಕೆಕೆಆರ್ಟಿಸಿ, "ಕಂಡಕ್ಟರ್‌ಗಳು ಗುರುತಿನ ಪುರಾವೆಗಳನ್ನು ಹಾರ್ಡ್ ಕಾಪಿಗಳ ಮೂಲಕ (ಒರಿಜಿನಲ್ ಅಥವಾ ಫೋಟೊಕಾಪಿ) ಮತ್ತು ಡಿಜಿಲಾಕರ್ ಮೂಲಕ ಸ್ವೀಕರಿಸಬಹುದು ಎಂಬ ಆದೇಶದ ಹೊರತಾಗಿಯೂ, ಕೆಲವು ಬಸ್ ಕಂಡಕ್ಟರ್‌ಗಳು ನಮಗೆ ದೂರುಗಳನ್ನು ಸ್ವೀಕರಿಸುತ್ತಿದ್ದೇವೆ. ಡಿಜಿಲಾಕರ್ ಮೂಲಕ ತೋರಿಸಿರುವ ಪುರಾವೆಗಳನ್ನು ಸ್ವೀಕರಿಸಲು ನಿರಾಕರಿಸುತ್ತಿದ್ದಾರೆ. ಮಹಿಳಾ ಪ್ರಯಾಣಿಕರಿಗೆ ಅನಗತ್ಯ ತೊಂದರೆಗಳನ್ನು ಸೃಷ್ಟಿಸುತ್ತಿದ್ದಾರೆ ಎಂದು ಹೇಳಿದೆ.

ಕಂಡಕ್ಟರ್‌ಗಳು ಡಿಜಿಲಾಕರ್ ಮೂಲಕ ಐಡಿ ಪುರಾವೆಗಳನ್ನು ಸ್ವೀಕರಿಸಬೇಕು ಮತ್ತು ಮಹಿಳಾ ಪ್ರಯಾಣಿಕರಿಗೆ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು ಎನ್ನುತ್ತಾರೆ.



# ಬಿಜೆಪಿ ಅಧ್ಯಕ್ಷರಾಗಿ ವಿಜಯೇಂದ್ರ ನೇಮಕ; ಪಕ್ಷದ ನಾಯಕರಲ್ಲಿ ಯಾವುದೇ ಅಸಮಾಧಾನವಿಲ್ಲ: ಪ್ರಲ್ಹಾದ್ ಜೋಶಿ

ಹುಬ್ಬಳ್ಳಿ: ಕರ್ನಾಟಕದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಶಾಸಕ ಬಿವೈ ವಿಜಯೇಂದ್ರ ಅವರನ್ನು ನೇಮಕ ಮಾಡಿರುವ ಹಿನ್ನಲೆಯಲ್ಲಿ ಪಕ್ಷದಲ್ಲಿ ಯಾವುದೇ ಅಸಮಾಧಾನವಿಲ್ಲ ಎಂದು ಕೇಂದ್ರ ಗಣಿ, ಕಲ್ಲಿದ್ದಲು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಮಂಗಳವಾರ ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರ ಪುತ್ರ ವಿಜಯೇಂದ್ರ ಅವರನ್ನು ಪಕ್ಷದ ರಾಜ್ಯಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ ನಂತರ ಪಕ್ಷದ ನಾಯಕರಲ್ಲಿ ಯಾವುದೇ ಅಸಮಾಧಾನವಿಲ್ಲ ಎಂದು ಸ್ಪಷ್ಟಪಡಿಸಿದರು.

'ಯಾವುದೇ ಅಸಮಾಧಾನವಿದ್ದರೆ ಚರ್ಚೆಯ ಮೂಲಕವೇ ಕುಳಿತು ಬಗೆಹರಿಸಿಕೊಳ್ಳುತ್ತೇವೆ. ವಿಜಯೇಂದ್ರ, ಯಡಿಯೂರಪ್ಪ ಮತ್ತು ನಾನು ಒಟ್ಟಿಗೆ ಕುಳಿತು ಸಮಸ್ಯೆ ಬಗೆಹರಿಸುವ ವಿಶ್ವಾಸವಿದೆ. ಪಕ್ಷದಿಂದ ಜನರು ನಿರೀಕ್ಷೆ ಇಟ್ಟುಕೊಂಡಿರುವ ಕಾರಣ ವಿಜಯೇಂದ್ರ ಅವರು ಎಲ್ಲರನ್ನೂ ಭೇಟಿಯಾಗುವ ವಿಶ್ವಾಸವಿದೆ' ಎಂದು ಹೇಳಿದರು.

ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ ಭಾರತ ಪ್ರಕಾಶಿಸುತ್ತಿದೆ ಮತ್ತು ನೆಲದ ಸಂಸ್ಕೃತಿಯು ಜಗತ್ತನ್ನು ಆಕರ್ಷಿಸುತ್ತಿದೆ ಮತ್ತು ಎಲ್ಲೆಡೆ ಸ್ವೀಕಾರವನ್ನು ಕಂಡುಕೊಳ್ಳುತ್ತಿದೆ. ಭಾರತೀಯ ಸಂಸ್ಕೃತಿಯು ಎಷ್ಟು ಬೆಳೆದಿದೆ ಎಂದರೆ ಅಮೆರಿಕದ ಶ್ವೇತಭವನದಿಂದ ಇಂಗ್ಲೆಂಡ್‌ನ ಅಧಿಕಾರದ ಕಾರಿಡಾರ್‌ಗಳವರೆಗೆ ಭಾರತೀಯ ಹಬ್ಬಗಳನ್ನು ಆಚರಿಸಲಾಗುತ್ತದೆ ಎಂದು ಜೋಶಿ ಹೇಳಿದರು.

ಇದೇ ವೇಳೆ, ವಿಜಯೇಂದ್ರ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ನೀಡಿದ್ದಕ್ಕೆ ಸಂಬಂಧಿಸಿದಂತೆ ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದ್ದ ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿಟಿ ರವಿ ಬೆಂಗಳೂರಿನಲ್ಲಿರುವ ಅವರ ಖಾಸಗಿ ನಿವಾಸಕ್ಕೆ ತೆರಳಿ ಅಭಿನಂದಿಸಿದ್ದಾರೆ. ಅಸಮಾಧಾನದ ವದಂತಿಗಳಿಗೆ ತೆರೆ ಎಳೆದ ರವಿ ಸಭೆಯಲ್ಲಿ ವಿಜಯೇಂದ್ರ ಅವರನ್ನು ಅಪ್ಪಿಕೊಂಡರು.

# ಅಸ್ಪಷ್ಟ ಜಾತಿ ಪ್ರಮಾಣಪತ್ರಕ್ಕಾಗಿ ಅಭ್ಯರ್ಥಿ ತಿರಸ್ಕಾರ: ಕೆಎಂಎಫ್ ಗೆ ಕರ್ನಾಟಕ ಹೈಕೋರ್ಟ್ ತರಾಟೆ

ಬೆಂಗಳೂರು: ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಿದ ಜಾತಿ ಪ್ರಮಾಣ ಪತ್ರ ಅಸ್ಪಷ್ಟ ಎಂಬ ಕಾರಣಕ್ಕೆ ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿಯ ಅರ್ಜಿ ವಜಾ ಮಾಡಿರುವ ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟದ (ಕೆಎಂಎಫ್) ಕ್ರಮ ಸರಿಯಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಹೇಳಿದೆ.

ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್ ದೀಕ್ಷಿತ್ ಅವರಿದ್ದ ವಿಭಾಗೀಯ ಪೀಠವು ಕೆಎಂಎಫ್ ಮೂಲ ಜಾತಿ ಪ್ರಮಾಣಪತ್ರವನ್ನು ಸ್ವೀಕರಿಸಲು ಮತ್ತು ಮೇಲ್ಮನವಿದಾರರ ಅಭ್ಯರ್ಥಿಯನ್ನು ಸೂಪರ್‌ನ್ಯೂಮರರಿ ಹುದ್ದೆಯನ್ನು ಸೃಷ್ಟಿಸುವ ಮೂಲಕ ಅಕೌಂಟ್ ಅಸಿಸ್ಟೆಂಟ್-ಗ್ರೇಡ್ ಖ ಹುದ್ದೆಗೆ ಆಯ್ಕೆ ಮತ್ತು ನೇಮಕಾತಿಗೆ ಪರಿಗಣಿಸುವಂತೆ ಸೂಚಿಸಿ ಆದೇಶ ನೀಡಿದೆ.

ಬೆಂಗಳೂರಿನ ಯಶವಂತಪುರ ನಿವಾಸಿ ದೇವರಾಜ್ ಪಿಆರ್ ಸಲ್ಲಿಸಿದ್ದ ಮೇಲ್ಮನವಿಯನ್ನು ಅಂಗೀಕರಿಸಿದ ವಿಭಾಗೀಯ ಪೀಠ, "ಅರ್ಹ ಉದ್ಯೋಗ ಆಕಾಂಕ್ಷಿಗಳನ್ನು ದೂರವಿಡುವುದು ಕಲ್ಯಾಣ ರಾಜ್ಯದಲ್ಲಿ ನಡೆಯುವುದು ಸಂತಸದ ಸಂಗತಿಯಲ್ಲ. ನ್ಯಾಯಾಲಯಗಳು,



ಸಾಮಾನ್ಯವಾಗಿ, ಮತ್ತು ರಿಟ್ ನ್ಯಾಯಾಲಯಗಳು, ನಿರ್ದಿಷ್ಟವಾಗಿ, ಕೆಲವು ನ್ಯಾಯಶಾಸ್ತ್ರದ ಸಿದ್ಧಾಂತಗಳನ್ನು ಉಲ್ಲೇಖಿಸಿ, ತಮ್ಮ ಪೋರ್ಟಲ್‌ಗೆ ಯೋಗ್ಯವಾದ ಕಾರಣವನ್ನು ತಂದ ನಾಗರಿಕನಿಗೆ ನ್ಯಾಯವನ್ನು ನಿರಾಕರಿಸಲಾಗುವುದಿಲ್ಲ ಎಂದು ಹೇಳಿದೆ.

ಜಾತಿ ಪ್ರಮಾಣ ಪತ್ರವನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಿದ್ದರಿಂದ 2022ರ ಅಕ್ಟೋಬರ್‌ನಲ್ಲಿ ಅಧಿಸೂಚಿಸಲಾದ 'ಖಾತೆ ಸಹಾಯಕ-ಗ್ರೇಡ್ ಖ' ಹುದ್ದೆಗೆ ಕೆಎಂಎಫ್‌ನಿಂದ ಮೀಸಲು ವರ್ಗದಡಿ ತನ್ನ ಉಮೇದುವಾರಿಕೆಯನ್ನು ಪರಿಗಣಿಸದಿರುವ ಬಗ್ಗೆ ಸಲ್ಲಿಸಿದ ಅರ್ಜಿಯನ್ನು ತಿರಸ್ಕರಿಸಿ ಏಕ ಸದಸ್ಯ ಪೀಠದ ನ್ಯಾಯಾಧೀಶರು ನೀಡಿದ ಆದೇಶವನ್ನು ಪ್ರಶ್ನಿಸಿ ದೇವರಾಜ್ ಮೇಲ್ಮನವಿ ಸಲ್ಲಿಸಿದ್ದರು.

# 8 ವರ್ಷಗಳಿಂದ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ ಪಿಂಪ್ ಅರೆಸ್ಟ್

ಬೆಂಗಳೂರು: ಸುಮಾರು ಎಂಟು ವರ್ಷಗಳಿಂದ ಪಿಂಪ್ ಕೆಲಸ ಮಾಡ್ತಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿ ಜೈಲಿಗೆ ಕಳುಹಿಸಿದ್ದಾರೆ.

ಆದರೆ ಜೈಲಿಗೆ ಹೋದರೂ ತನ್ನ ಹಳೆಚಾಳಿ ಬಿಡದ ಆತ ವೇಶ್ಯಾವಾಟಿಕೆಯನ್ನೇ ತನ್ನ ವೃತ್ತಿ ಮಾಡಿಕೊಂಡ ಪಿಂಪ್ ಮಂಜುನಾಥ್ ಅಲಿಯಾಸ್ ಸಂಜುವನ್ನು ಸಿಸಿಬಿ ಪೊಲೀಸರು ಅರೆಸ್ಟ್ ಮಾಡಿದ್ದಾರೆ.

ಲೊಕ್ಯಾಂಟೋ ಆ್ಯಪ್ ಮೂಲಕ ಫುಲ್ ಟೈಂ ಬ್ಯುಸಿನೆಸ್ ಮಾಡಿಕೊಂಡಿದ್ದ ಸಂಜುವನ್ನು ಈ ಹಿಂದೆ ಸುದ್ಗುಂಟೆಪಾಳ್ಯ ಪೊಲೀಸರು ಬಂಧಿಸಿದ್ದರು.

ಜೈಲಿನಲ್ಲಿದ್ದುಕೊಂಡು ಕಸ್ಟಮರ್ಸ್‌ನ ಸಂಪರ್ಕಿಸಿ ಅವರು ಹೇಳಿದವರನ್ನು ಸಂಜು ಹೇಳಿದ ಜಾಗಕ್ಕೆ ಕೇಳಿದ ಹುಡುಗಿಯರನ್ನು ಕಳುಹಿಸುತ್ತಿದ್ದ.



ಹೊರರಾಜ್ಯದಿಂದ ಕೆಲಸ ಅರಸಿ ಬರುವ ಹುಡುಗೀಯರೇ ಈತನ ಟಾರ್ಗೆಟ್. ಬಾಡಿಗೆ ಮನೆ ಮಾಡಿಸಿ ಹುಡುಗಿಯರನ್ನು ಇರಿಸುತ್ತಿದ್ದ.

ಎಂಟು ವರ್ಷಗಳಿಂದ ಸಾವಿರಾರು ಗಿರಾಕಿಗಳಿಗೆ ಸಂಜು ಹುಡುಗಿಯರನ್ನ ಕಳುಹಿಸುತ್ತಿದ್ದ. ಹುಡುಗಿಯರನ್ನು ಕಳುಹಿಸಿ ಆನ್ಲೈನ್ ಪೇ ಮೂಲಕ ಹಣ ಪಡೆದುಕೊಳ್ಳುತ್ತಿದ್ದ.

ಸದ್ಯ ಜೈಲಿನಿಂದ ಬಂದು ಹುಳಿಮಾವು ಬಳಿ ಇರುವ ಬಾಡಿಗೆ ಮನೆಯಲ್ಲಿ ವೇಶ್ಯಾವಾಟಿಕೆ ದಂಧೆ ನಡೆಸ್ತಿದ್ದ ಎನ್ನಲಾಗಿದೆ. ಅರುಣ್, ರಾಜೇಶ್, ರಾಘವೇಂದ್ರ ಹಾಗೂ ದರ್ಶನ್ ಎಂಬುವವರು ಸಹ ಆತನಿಗೆ ಸಹಕರಿಸುತ್ತಿದ್ದರು ಎನ್ನಲಾಗಿದೆ.

ಸದ್ಯ ಸಿಸಿಬಿ ಪೊಲೀಸರು ಇವರನ್ನು ವಿಚಾರಣೆ ನಡೆಸುತ್ತಿದ್ದಾರೆ. ಬಾಡಿ ವಾರೆಂಟ್ ಪಡೆದು ಸಂಜುನನ್ನೂ ಕೂಡ ವಿಚಾರಣೆ ನಡೆಸಲು ಸಿಸಿಬಿ ನಿರ್ಧರಿಸಿದೆ ಎಂದು ತಿಳಿದುಬಂದಿದೆ.

# ಕುಡಿದ ಅಮಲಿನಲ್ಲಿ ಸ್ನೇಹಿತನನ್ನೇ ಚಾಕುವಿನಿಂದ ಇರಿತ

ಬೆಂಗಳೂರು: ಕುಡಿದ ಅಮಲಿನಲ್ಲಿ ತನ್ನ ಸ್ನೇಹಿತನನ್ನು ಚಾಕುವಿನಿಂದ ಇರಿದು ಕೊಲೆ ಮಾಡಿದ್ದ 36 ವರ್ಷದ ವ್ಯಕ್ತಿಯನ್ನು ಕೆಂಗೇರಿ ಪೊಲೀಸರು ಬಂಧಿಸಿದ್ದಾರೆ.

ಆರೋಪಿಯನ್ನು ಮಾದೇಶ ಆರ್ ಎಂದು ಗುರುತಿಸಲಾಗಿದ್ದು, ಈತ ತನ್ನ ಸ್ನೇಹಿತ ರಾಜಕುಮಾರ್ (34) ಎಂಬಾತನನ್ನು ಕೊಲೆ ಮಾಡಿದ ಆರೋಪ ಎದುರಿಸುತ್ತಿದ್ದಾನೆ. ಪೊಲೀಸ್ ಮೂಲಗಳ ಪ್ರಕಾರ ಇಬ್ಬರೂ ಕೆಂಗೇರಿ ಸ್ಯಾಟಲೈಟ್ ಟೌನ್ ನಿವಾಸಿಗಳಾಗಿದ್ದು, ವೃತ್ತಿಯಲ್ಲಿ ಕ್ಯಾಬ್ ಚಾಲಕರಾಗಿದ್ದರು. ನವೆಂಬರ್ 6 ರಂದು ರಾತ್ರಿ ಮಾದೇಶ ಮತ್ತು ರಾಜ್‌ಕುಮಾರ್ ಅವರ ಮನೆಯ ಸಮೀಪವಿರುವ ಖಾಲಿ ಜಾಗದಲ್ಲಿ



ಮದ್ಯ ಸೇವಿಸುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇಬ್ಬರ ನಡುವೆ ಮಾರಾಮಾರಿ ನಡೆದಿದ್ದು, ಮಾದೇಶ ರಾಜ್‌ಕುಮಾರ್‌ಗೆ ಚಾಕುವಿನಿಂದ ಇರಿದಿದ್ದಾನೆ ಎನ್ನಲಾಗಿದೆ.

ಚಾಕುವಿನಿಂದ ಇರಿದ ನಂತರ ಮಾದೇಶ ತನ್ನ ಕಾರಿನಲ್ಲಿ ಹೋಗಿ ಖಲೀಂ ಎಂದು ಗುರುತಿಸಲಾದ ಮತ್ತೊಬ್ಬ ಸ್ನೇಹಿತನನ್ನು ಕರೆತಂದನು, ರಾಜ್‌ಕುಮಾರ್ ಮೇಲೆ ಯಾರೋ ಹಲ್ಲೆ ಮಾಡಿದ್ದಾರೆಂದು ತಿಳಿದು ಅವನನ್ನು ರಕ್ಷಿಸಲು ಹೋಗುತ್ತಿದ್ದೇನೆ ಎಂದು ಹೇಳಿದ್ದ. "ಮಾದೇಶ ಮತ್ತು ಖಲೀಂ ರಾಜ್‌ಕುಮಾರ್ ಅವರನ್ನು ಆಸ್ಪತ್ರೆಗೆ ಕರೆದೊಯ್ದರು.

ಬಳಿಕ ಪೊಲೀಸ್ ವಿಚಾರಣೆ ವೇಳೆ ಖಲೀಂ ತಪ್ಪೊಪ್ಪಿಕೊಂಡಿದ್ದು, ಕೂಡಲೇ ಮಾದೇಶ ತಲೆಮರೆಸಿಕೊಂಡಿದ್ದಾನೆ. ರಾಜ್‌ಕುಮಾರ್ ಗಾಯಗೊಂಡು ಮೃತಪಟ್ಟಿದ್ದಾರೆ. ಮರುದಿನ ಮಾದೇಶನನ್ನು ಬಂಧಿಸಲಾಯಿತು' ಎಂದು ಪೊಲೀಸರು ತಿಳಿಸಿದ್ದಾರೆ.

# ಗೋಕಾಕ : ಅಮ್ಮ ಬುದ್ಧಿಮಾತು ಹೇಳಿದ್ದಕ್ಕೆ ಮನನೊಂದ ಮಗ ಆತ್ಮಹತ್ಯೆಗೆ ಶರಣು

ಮೂಡಲಗಿ: ಬೆಳಗಾವಿ ಜಿಲ್ಲೆಯ ಮೂಡಲಗಿ ಪಟ್ಟಣದ ದೇಶಪಾಂಡೆ ಫ್ಲಾಟ್‌ನಲ್ಲಿ ಓದಿಕೋ ಎಂದು ತಾಯಿ ಬುದ್ಧಿಮಾತು ಹೇಳಿದ್ದಕ್ಕೆ ಮನನೊಂದ ಮಗ ಆತ್ಮಹತ್ಯೆಗೆ ಶರಣಾದ ಘಟನೆ ನಡೆದಿದೆ.



ಆತ್ಮಹತ್ಯೆ ಮಾಡಿಕೊಂಡ ಬಾಲಕ ಸಮರ್ಥ್ ಸುರೇಶ್ ಭಜಂತ್ರಿ (14) ಎಂದು ತಿಳಿದುಬಂದಿದೆ. ಅಮ್ಮ ಸ್ಕೂಲ್ ರಜೆ ಇದೆ ಅಂತ ತುರುಗಬೇಡಾ, ಓದ್ಕೋ ಎಂದಿದ್ದಾರೆ. ಇಷ್ಟಕ್ಕೆ ಬಾಲಕ ರೂಮ್ ಬಾಗಿಲು ಹಾಕಿಕೊಂಡು ಸೀರೆಯಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಈತ ಪಟ್ಟಣದ ಖಾಸಗಿ ಶಾಲೆಯಲ್ಲಿ 8ನೇ ತರಗತಿ ಓದುತ್ತಿದ್ದನು ಎಂದು ತಿಳಿದುಬಂದಿದೆ. ದೀಪಾವಳಿ ಹಿನ್ನೆಲೆಯಲ್ಲಿ ಶಾಲೆಗಳಿಗೆ ರಜೆ ಇದ್ದ ಕಾರಣ ಅಮ್ಮ ಹೇಳಿದ್ದೇ ತಪ್ಪಾಯಿತೇನೋ, ಆದರೆ ಇಷ್ಟ ಚಿಕ್ಕ ವಿಷಯಕ್ಕೆ ಬಾಲಕ ದುಡುಕಿನ ನಿರ್ಧಾರ ತೆಗೆದುಕೊಂಡಿದ್ದಾನೆ.

ಘಟನೆಯ ಕುರಿತು ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಂಪುಟ: 4 ಸಂಚಿಕೆ: 239 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089